ಸಂಪುಟ : 9 ಸಂಚಿಕೆ 124 ಪುಟ : 4 ಬೆಲೆ: 3.00 ಬುಧವಾರ ಜೂನ್ 19 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 124 Pages : 4 Price : 3.00 Wednesday June 19 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಜೂನ್ 21ರಂದು ಬೆಳಿಗ್ಗೆ 6 ಗಂಟೆಗೆ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಪಟ್ಟಣದ ಪತಂಜಲಿ ಯೋಗ ಸಮಿತಿ ಹಾಗೂ ವಿವಿಧ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಪಟ್ಟಣದ ಕೆ.ಎಸ್.ಎಸ್. ಮಾಹಾವಿದ್ಯಾಲಯದ ಮೈದಾನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಗದಗ ಅಡವೀಂದ್ರಸ್ವಾಮಿಮಠದ ಮಹೇಶ್ವರಸ್ವಾಮೀಜಿ, ಅಧ್ಯಕ್ಷತೆಯನ್ನು ಕೆಎಸ್‌ಎಸ್ ಮಾಹಾವಿದ್ಯಾಲಯದ ಕಾರ್ಯದರ್ಶಿ ರವೀಂದ್ರ ದಂಡಿನ, ಉದ್ಘಾಟಕರಾಗಿ ಶಿರಹಟ್ಟಿ ತಾಲೂಕಾ ಧರ್ಮಸ್ಥಳ ಸಂಘದ ಯೋಜನಾಧಿಕಾರಿ ಪುನಿತ ಓಲೇಕಾರ, ಮುಖ್ಯ ಅತಿಥಿಗಳಾಗಿ ಎಂ.ಡಿ. ಬಟ್ಟೂರ, ಎಸ್.ಸಿ. ಬಡ್ನಿ, ಡಾ. ಎಸ್.ಸಿ. ಚವಡಿ, ಪಿ.ಎ. ವಂಟಕರ್, ವಿಜಯ ನೀಲಗುಂದ, ಪಿಎಸ್‌ಐ ಲಕ್ಷ್ಮಣ ಗೌಡಿ, ದ್ಯಾಮಣ್ಣಾ ನೀಲಗುಂದ, ಬಸವರಾಜ ಹಾರೋಗೇರಿ, ಬಿ.ವಾಯ್. ಹುಡೇದ, ರವಿಕುಮಾರ, ಅನೂಪ ಕೆಂಚನಗೌಡರ, ಮುಳಗುಂದ ಧರ್ಮಸ್ಥಳ ಮೇಲ್ವಿಚಾರಕಿ ಶಾಂತಾ, ಗೀತಾ ಜಾಧಾವ, ಮಂಗಳಾ ನೀಲಗುಂದ, ಹರ್ಷಲತಾ ದೇಶಪಾಂಡೆ, ಅಕ್ಕಮ್ಮಾ ನೀಲಗುಂದ, ಶೋಭಾ ಪಾಟೀಲ್, ಶಿವಾನಿ ಅಕ್ಕಾ, ಕವಿತಾ ದೊಟಿಕಲ್ ಭಾಗವಹಿಸುವರು ಎಂದು ಯೋಗ ಶಿಕ್ಷಕ ಪ್ರಕಾಶ ಮದ್ದಿನ ಪ್ರಕಟಣೆಗೆ ತಿಳಿಸಿದ್ದಾರೆ.

## ಜೂ. 21ರಂದು ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕ ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್ ಅವರು ಜೂನ್ 21ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದು, ವಿವರ ಈ ಕೆಳಗಿನಂತಿದೆ.

ಜೂನ್ 21ರಂದು ಬೆಳಿಗ್ಗೆ 10.30 ಗಂಟೆಗೆ ಗದಗ ನಗರದಲ್ಲಿರುವ ಅವರ ಜನಸಂಪರ್ಕ ಕಾರ್ಯಾಲಕ್ಕೆ ಭೇಟಿ ನೀಡಿ ನಂತರ ಬೆಳಿಗ್ಗೆ 11.00.ಗಂಟೆಗೆ ಪತ್ರಿಕಾಗೋಷ್ಠಿ ನಡೆಸುವರು.

ಮಧ್ಯಾಹ್ನ 12ಗಂಟೆಗೆ ಚುನಾಯಿತ ಪ್ರತಿನಿಧಿಗಳು, ಕಾರ್ಯಕರ್ತರು ಹಾಗೂ ಸಾರ್ವಜನಿಕರನ್ನು ಬೇಟಿ ಮಾಡುವರು. ಮಧ್ಯಾಹ್ನ 2.30ಗಂಟೆಗೆ ಮುಂಡರಗಿ ತಾಲೂಕಿನ ಕೊರ್ಲಹಳ್ಳಿ ಗ್ರಾಮ ಪಂಚಾಯತಿಗೆ ತೆರಳಿ ಗ್ರಾಮ ಪಂಚಾಯತಿ ಸದ್ಯಸರು ಮತ್ತು ಸಾರ್ವಜನಿಕರನ್ನು ಭೇಟಿ ಮಾಡುವರು. ನಂತರ 3.30 ಗಂಟೆಗೆ ಮುಂಡರಗಿ ಮೂಲಕ ಬೆಂಗಳೂರಿಗೆ ಹೊರಡುವರು ಎಂದು ಸರ್ಕಾರಿ ಮುಖ್ಯ ಸಚೇತಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.



ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಮಂಗಳವಾರ ಲಕ್ಷ್ಮೇಶ್ವರ ತಾಲೂಕಿನ ಯತ್ತಿನಹಳ್ಳಿ ಗ್ರಾಮದ ಯೋಧ ಕು.ಪ್ರವೀಣಗೌಡ ಚನ್ನವೀರಗೌಡ ಬೆಟದೂರ ಇವರು 20 ವರ್ಷಗಳ ನಂತರ ಭಾರತೀಯ ಸೇನೆಯ ಎ.ಸಿ ಕಮಾಂಡರ ಆಗಿ ಬಡ್ತಿ ಪಡೆದು ಲಕ್ಷ್ಮೇಶ್ವರ ತಾಲೂಕಿನ ಕೀರ್ತಿಯನ್ನು ದೇಶಕ್ಕೆ ಪರಿಚಯಿಸಿದ್ದಕ್ಕಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಸಂಸದರಾದ ಬಸವರಾಜ ಬೊಮ್ಮಾಯಿ ಸನ್ಮಾನಿಸಿ, ಅಭಿನಂದಿಸಿದರು.

### ದಿಶಾ ಸಮಿತಿ ಸಭೆಯಲ್ಲಿ ಜಿಲ್ಲೆಯನ್ನು ತೋಟಗಾರಿಕೆ ಜಿಲ್ಲೆಯನ್ನಾಗಿಸಲು ಸಂಸದ ಬಸವರಾಜ ಬೊಮ್ಮಾಯಿ ಸೂಚನೆ

## ಯೋಜನೆಯ ಸ್ಪಷ್ಟತೆಯರಿತು ಕಾರ್ಯ ನಿರ್ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಸೂಕ್ತ ವಾತಾವರಣವಿದ್ದು, ತೋಟಗಾರಿಕೆ ಜಿಲ್ಲೆಯಾಗಿಸಲು ಅಧಿಕಾರಿಗಳು ಶ್ರಮಿಸಬೇಕೆಂದು ಗದಗ-ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ( ದಿಶಾ) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧೆಡೆ ಮೆಣಸಿನಕಾಯಿ, ಈರುಳ್ಳಿ, ಮಾವು, ಬಾಳೆ, ದ್ರಾಕ್ಷಿ, ದಾಳಿಂಬೆ ಬೆಳೆಯಲಾಗುತ್ತಿದ್ದು, ಮುಂಡರಗಿ ಹಾಗೂ ಶಿರಹಟ್ಟಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ತೋಟಗಾರಿಕೆ ಬೆಳೆಗಳನ್ನು ಬೆಳೆಯಲಾಗುತ್ತಿದೆ. ಆಯಾ ಪ್ರದೇಶದ ಸಂಭಾವ್ಯತೆಯನ್ನು ಪರಿಶೀಲಿಸಿ 60 ದಿನಗಳೊಳಗೆ ಡಿಪಿಆರ್ ಸಿದ್ಧಪಡಿಸಿ ಸಲ್ಲಿಸಬೇಕು. ನಂತರ ಮ್ಯಾಪಿಂಗ್ ಮಾಡಿ ರೈತರು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಈ ಕುರಿತು ತರಬೇತಿ ನೀಡಿದರೆ ತೋಟಗಾರಿಕೆಯಲ್ಲಿ ಅತ್ಯುನ್ನತ ಫಲಿತಾಂಶವನ್ನು ಕಾಣಬಹುದು, ಜಿಲ್ಲೆಯನ್ನು ತೋಟಗಾರಿ-ಕೆ ಜಿಲ್ಲೆಯನ್ನಾಗಿಸಬಹುದು. ಈ ನಿಟ್ಟಿನಲ್ಲಿ ಜಿಲ್ಲೆಯ ಮಹತ್ವಪೂರ್ಣ ಅಭಿವೃದ್ಧಿಗೆ ಪ್ರಾಶಸ್ತ್ಯ ಕೊಟ್ಟಂತಾಗುತ್ತದೆ. ಈ ನಿಟ್ಟಿನಲ್ಲಿ ಅಧಿಕಾರಿವರ್ಗ ಕಾರ್ಯ ಪ್ರವೃತ್ತರಾಗಬೇಕು ಎಂದು ತಿಳಿಸಿದರು.

▸▸3ನೇ ಪುಟಕ್ಕೆ





ಜಲಜೀವನ ಮಿಷನ್ ಯೋಜನೆಯ 336 ಕಾಮಗಾರಿಗಳಲ್ಲಿ 200 ಕಾಮಗಾರಿಗಳು ಪೂರ್ಣಗೊಂಡಿವೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಸಭೆಗೆ ತಿಳಿಸಿದಾಗ, ಬಡವರಿಗೆ ಶಾಶ್ವತವಾಗಿ ನೀರು ಒದಗಿಸುವ ಯೋಜನೆ ಇದಾಗಿದ್ದು, ಈ ಯೋಜನೆಯ ಅನುಷ್ಠಾನದ ಪರಿಶೀಲನೆ ಕೈಗೊಳ್ಳಿ. ಅಲ್ಪಾವಧಿ ಟೆಂಡರ್ ಕರೆದು ಬಾಕಿ ಉಳಿದ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಸಂಸದರು ತಿಳಿಸಿದರು.

> ಬಡಜನರ, ದೀನ-ದಲಿತರ, ಮಹಿಳೆಯರ ಶ್ರೇಯೋಭಿವೃದ್ಧಿಗಾಗಿ ವಿವಿಧ ಯೋಜನೆಗಳನ್ನು ರಾಜ್ಯ ಮತ್ತು ಕೇಂದ್ರ ಸರಕಾರದ ಸಹಭಾಗಿತ್ವದಲ್ಲಿ ಜಾರಿಗೊಳಿಸಲಾಗುತ್ತದೆ. ಯೋಜನೆಯ ಸ್ಪಷ್ಟತೆಯನ್ನು ತಿಳಿದುಕೊಂಡು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಿ ಯೋಜನೆಯ ಸೌಲಭ್ಯ ಅರ್ಹರಿಗೆ ತಲುಪಿಸುವ ಕಾರ್ಯವನ್ನು ಅಧಿಕಾರಿಗಳು ಮಾಡಬೇಕು. ಯೋಜನೆಯ ಅನುಷ್ಠಾನಕ್ಕೆ ವಿನಾಕಾರಣ ವಿಳಂಬ ಹಾಗೂ ಉದಾಸೀನ ತೋರಬಾರದು. ಹಾಗೆ ಮಾಡಿದರೆ ನಮ್ಮಷ್ಟಕ್ಕೆ ನಾವೇ ಆತ್ಮವಂಚನೆ ಮಾಡಿಕೊಂಡಂತಾಗುತ್ತದೆ.
>
> – ಬಸವರಾಜ ಬೊಮ್ಮಾಯಿ.
> ಹಾವೇರಿ-ಗದಗ ಕ್ಷೇತ್ರದ ಸಂಸದರು.

### ಅತಿವೃಷ್ಟಿಯಿಂದಾದ ಹಾನಿಯ ಕುರಿತ ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್

## ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಿ

■ವಿಜಯಸಾಕ್ಷಿ ಸುದ್ದಿ, ಗದಗ

ಅಧಿಕ ಮಳೆಯಿಂದಾಗುವ ಅತಿವೃಷ್ಟಿ ನಿಯಂತ್ರಣಕ್ಕೆ ಜಿಲ್ಲೆಯ ವಿವಿಧ ಇಲಾಖೆಯ ಅಧಿಕಾರಿಗಳು ತಮ್ಮ ಇಲಾಖೆಗೆ ಸಂಬಂಧಪಟ್ಟಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಮೂಲಕ ಜನ-ಜಾನುವಾರುಗಳ ಜೀವಹಾನಿ ತಡೆಗೆ ಮುಂದಾಗಬೇಕು ಹಾಗೂ ಸಾರ್ವಜನಿಕರ ಆಸ್ತಿಪಾಸ್ತಿ ಹಾನಿ ತಪ್ಪಿಸಲು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

ಮಂಗಳವಾರ ಜಿಲ್ಲಾಡಳಿತ ಭವನದಲ್ಲಿ ಜರುಗಿದ ಪ್ರಸಕ್ತ ಸಾಲಿನ ಅತಿವೃಷ್ಟಿಯಿಂದಾದ ಹಾನಿಯ ಕುರಿತ ಸಭೆಯಲ್ಲಿ ಅವರು ಮಾತನಾಡಿದರು.

ಅತಿವೃಷ್ಟಿಯಿಂದ ಪ್ರವಾಹ ಉಂಟಾಗಬಹುದಾದ ಜಿಲ್ಲೆಯ 11 ಗ್ರಾಮಗಳು ಹಾಗೂ ನಗರ ಪ್ರದೇಶದ 14 ವಾರ್ಡ್‌ಗಳನುಡೀಗಾಗಲೇ ಗುರುತಿಸಲಾಗಿದೆ. ಅಧಿಕ ಪ್ರಮಾಣದ ಮಳೆ ಸುರಿದಲ್ಲಿ ಅಧಿಕಾರಿಗಳು ಗುರುತಿಸಲಾದ ಪ್ರದೇಶಗಳಿಗೆ ತಕ್ಷಣ ಭೇಟಿ ನೀಡಿ, ಪರಿಸ್ಥಿತಿ ನಿಯಂತ್ರಣ ಕುರಿತಂತೆ ಕ್ರಮ ವಹಿಸಬೇಕು ಎಂದರು.

ಮಲಪ್ರಭಾ ಹಾಗೂ ಬೆಣ್ಣೆಹಳ್ಳ ಪ್ರವಾಹದಿಂದ ಹಾನಿಗೊಳಗಾಗಬಹುದಾದ ಜನವಸತಿ ಪ್ರದೇಶಗಳಲ್ಲಿ ಅಗತ್ಯವಿದ್ದಲ್ಲಿ ಕಾಳಜಿ ಕೇಂದ್ರ ತೆರೆಯಲು ಈಗಾಗಲೇ ನರಗುಂದ ತಾಲೂಕಿನ 12, ರೋಣ ತಾಲೂಕಿನ 16 ಸ್ಥಳಗಳನ್ನು ಗುರುತಿಸಲಾಗಿದೆ. ಹಾಗೆಯೇ ಮುಂಡರಗಿ ತಾಲೂಕಿನ 8, ಶಿರಹಟ್ಟಿ ತಾಲೂಕಿನ 10 ಸ್ಥಳಗಳನ್ನು ಗುರುತಿಸಿದೆ. ಅದರಂತೆ 4 ಗೋಶಾಲೆ ತೆರೆಯಲು ಸ್ಥಳ ನಿಗದಿಪಡಿಸಿ ಇಟ್ಟುಕೊಳ್ಳಲಾಗಿದೆ ಎಂದರು.

ಅತಿವೃಷ್ಟಿಯಿಂದಾಗುವ ಮನೆ ಹಾಗೂ ಬೆಳೆ ಹಾನಿಗೆ ಸರ್ಕಾರದ ನಿರ್ದೇಶನದಂತೆ ಕ್ರಮ ವಹಿಸಿ ಪರಿಹಾರ ವಿತರಣೆ ಮಾಡಬೇಕು. ಅಗತ್ಯವಿದ್ದಲ್ಲಿ ಜಂಟಿ ಸಮೀಕ್ಷೆ ಮೂಲಕ ಹಾನಿಯ ಪ್ರಮಾಣ ಗುರುತಿಸಿ ಪರಿಹಾರಕ್ಕೆ ಮುಂದಾಗುವಂತೆ ಸೂಚಿಸಿದರು.

ದಿಢೀರ್ ಅತಿವೃಷ್ಟಿಯಿಂದ ಗ್ರಾಮಗಳು ಜಲಾವೃತವಾದಲ್ಲಿ ತಕ್ಷಣ ಅಗ್ನಿಶಾಮಕ ಇಲಾಖೆ ಅಧಿಕಾರಿಗಳು ರಕ್ಷಣಾ ಸಾಮಗ್ರಿಗಳೊಂದಿಗೆ ಸ್ಥಳಕ್ಕೆ ತೆರಳಿ ರಕ್ಷಣಾ ಕಾರ್ಯಾಚರಣೆ ಕೈಗೊಳ್ಳಬೇಕು. ಕಾರ್ಯಾಚರಣೆಗೆ ಅಗತ್ಯವಿರುವ ಸಾಮಗ್ರಿಗಳನ್ನು ಸುಸ್ಥಿತಿಯಲ್ಲಿಟ್ಟುಕೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೊಡ್, ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಮೇಶ ಪಾಟೀಲ, ಪ್ರಾದೇಶಿಕ ಸಾರಿಗೆ ಅಧಿಕಾರಿ ಮಂಜುನಾಥ ಶಿರಾಳ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.



ಜಿಲ್ಲೆಯಲ್ಲಿ ಹರಿದಿರುವ ಮಲಪ್ರಭಾ ನದಿ ಹಾಗೂ ಬೆಣ್ಣೆ ಹಳ್ಳ ಪ್ರವಾಹದಿಂದ ನರಗುಂದ ತಾಲೂಕಿನ 16 ಹಾಗೂ ರೋಣ ತಾಲೂಕಿನ 16 ಗ್ರಾಮಗಳು ಪ್ರವಾಹಕ್ಕೊಳಗಾಗುವ ಸಂಭವವಿದೆ. ಆ ಭಾಗದ ಅಧಿಕಾರಿಗಳು ಕ್ಷೇತ್ರದ ಕುರಿತು ನಿರಂತರ ನಿಗಾ ವಹಿಸಬೇಕು. ತುಂಗಭದ್ರಾ ನದಿ ಪ್ರವಾಹದಿಂದ ಶಿರಹಟ್ಟಿ ತಾಲೂಕಿನ 10 ಹಾಗೂ ಮುಂಡರಗಿ ತಾಲೂಕಿನ 11 ಗ್ರಾಮಗಳು ಬಾಧಿತವಾಗುವ ಹಳ್ಳಿಗಳೆಂದು ಗುರುತಿಸಲಾಗಿದ್ದು, ಅಲ್ಲಿಯೂ ಸಹ ಅಧಿಕಾರಿಗಳು ನಿರಂತರ ನಿಗಾ ವಹಿಸುವ ಮೂಲಕ ಜೀವ ಹಾನಿ ತಡೆಗೆ ಮುಂದಾಗುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

## ಬಸವರಾಜ ಬೊಮ್ಮಾಯಿಯವರಿಗೆ ಸ್ವಾಗತ

■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ – ಗದಗ ಸಂಸದರಾಗಿ ಪ್ರಪ್ರಥಮ ಬಾರಿಗೆ ಗದಗ ನಗರಕ್ಕೆ ಆಗಮಿಸಿದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ರವರನ್ನು ವಿಜೃಂಭ ಣೆಯಿಂದ ಸ್ವಾಗತಿಸಲಾಯಿತು.

ಈ ಸಂದರ್ಭದಲ್ಲಿ ಶಾಸಕ ಸಿ.ಸಿ. ಪಾಟೀಲ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಮಾಜಿ ಜಿಲ್ಲಾಧ್ಯಕ್ಷ ಮೋಹನ ಮಾಳಶೆಟ್ಟಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಪ್ರಮುಖರಾದ ಅಶೋಕ ಸಂಕಣ್ಣವರ, ಬಸವರಾಜ ಕೊರ್ಲಹಳ್ಳಿ, ನಾಗರಾಜ ಕುಲಕರ್ಣಿ, ಅನಿಲ ಅಬ್ಬಿಗೇರಿ, ಗಂಗಾಧರ ಹಬೀಬ, ಬೂದಪ್ಪ ಹಳ್ಳಿ, ಮುತ್ತಣ್ಣ ಮೂಲಿಮನಿ, ಸಂತೋಷ ಮೇಲಗಿರಿ, ರಮೇಶ ಸಜ್ಜಗಾರ, ಮಂಜುನಾಥ ಶಾಂತಗೇರಿ, ಉಮೇಶ ಹಡಪದ, ಜಯಶ್ರೀ ಉಗಲಾಟದ, ಶಾರದಾ ಸಜ್ಜನ, ಅಶ್ವಿನಿ ಜಗತಾಪ, ರೇಖಾ ಬಂಗಾರಶೆಟ್ಟರ, ವಂದನಾ ವರ್ಣೇಕರ, ರಾಜು ಹೊಂಗಲ, ಕೆ.ಪಿ. ಕೊಟಿಗೌಡ್ರ, ರತ್ನಾ ಕುರಗೊಡ, ಅಕ್ಕಮ್ಮ ವಸ್ತ್ರದ, ಯೋಗೇಶ್ವರಿ ಭಾವಿಕಟ್ಟಿ, ಸುಮಂಗಲ ಕೊನೆವಾಲ, ತಕ್ಕಲಕೋಟಿ, ಶೇಖಮ್ಮ ಮಾಸರೆಡ್ಡಿ, ಕಿರಣ ಕಲಾಲ, ಸಿದ್ರಾಮೇಶ ಹಿರೇಮಠ, ಹನಮಂತಪ್ಪ ದಿಂಡೆಣ್ಣವರ, ವಿಶ್ವನಾಥ ಶಿರಿಗಣ್ಣವರ, ವಿನೋದ ಹಂಸನೂರ ಮುಂತಾದವರಿದ್ದರು.



### ‘ಅಮೃತ ನಗರೋತ್ಥಾನ’ 4ನೇ ಹಂತದ ರೂ 18.26 ಕೋಟಿ ಕಾಮಗಾರಿಯ ಶಂಕುಸ್ಥಾಪನೆ

## ಕಾಮಗಾರಿಗಳ ಗುಣಮಟ್ಟ ಉತ್ಕೃಷ್ಟವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಅನುದಾನದಲ್ಲಿ ಗುಣಮಟ್ಟದ ಕಾಮಗಾರಿಗಳು ನೆರವೇರಿದಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಕೆ. ಪಾಟೀಲ್ ಹೇಳಿದರು.

ನಗರಸಭೆ ಆವರಣದಲ್ಲಿ ಮಂಗಳವಾರ ಜಿಲ್ಲಾಡಳಿತ ಮತ್ತು ನಗರಸಭೆಯ ಸಹಯೋಗದಲ್ಲಿ 18.26 ಕೋಟಿ ರೂ.ಗಳ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಯ ಶಂಕುಸ್ಥಾಪನೆಯನ್ನು ನೆರವೇರಿಸಿ ಅವರು ಮಾತನಾಡಿದರು.

ನಗರಗಳಿಗೆ ಮೂಲಭೂತ ಸೌಲಭ್ಯದ ಕೊರತೆ ಸಾಕಷ್ಟಿದೆ. ಈ ಅನುದಾನದಲ್ಲಿ ಕಾಮಗಾರಿ ಪ್ರಾರಂಭಗೊಳ್ಳುವ ಮೂಲಕ ಮೂಲಭೂತ ಸೌಲಭ್ಯದ ಕೊರತೆ ಕಡಿಮೆಯಾಗಲಿದೆ. ಕಾಮಗಾರಿಗಳಿಗೆ ಸಾಕಷ್ಟು ಹಣ ಹರಿದು ಬರುತ್ತಿದೆ. ಹಾಗಾಗಿ ಕಾಮಗಾರಿಯ ಅನುಷ್ಠಾನದಲ್ಲಿ ಕೆಲಸದ ಗುಣಮಟ್ಟ ಮಾತ್ರ ಸುಧಾರಿಸಬೇಕು ಎಂದು ಅಭಿಪ್ರಾಯಪಟ್ಟರು.

ಲೋಕಸಭಾ ಸದ್ಯಸ ಬಸವರಾಜ ಬೊಮ್ಮಾಯಿ ಮಾತನಾಡಿ, 5 ವರ್ಷದ ಅಧಿಕಾರಾವಧಿಯಲ್ಲಿ ಎಲ್ಲಾ ಪಕ್ಷದ ಚುನಾಯಿತ ಜನ ಪ್ರತಿನಿಧಿಗಳು 59 ತಿಂಗಳು ಅಭಿವೃದ್ಧಿ ಕಡೆಗೆ ಗಮನ ಹರಿಸಿ, ಒಂದು ತಿಂಗಳು ಮಾತ್ರ ರಾಜಕೀಯ ಮಾಡಿದಾಗ ಜನರಿಗೆ ನ್ಯಾಯ ಒದಗಿಸಿದಂತಾಗುತ್ತದೆ ಎಂದರು.

▸▸3ನೇ ಪುಟಕ್ಕೆ




ಗದಗ ಜಿಲ್ಲೆ ರಾಜ್ಯದಲ್ಲಿ ಪ್ರಮುಖ ನಗರ ಹಾಗೂ ಭವಿಷ್ಯದ ನಗರವಾಗಿದೆ. ಅಭಿವೃದ್ಧಿಯಲ್ಲಿ ಯೋಜನಾಬದ್ಧವಾಗಿ ಕಾರ್ಯ ಮಾಡಿದರೆ, ಮಹಾನಗರ ಔದ್ಯೋಗಿಕ ಕೇಂದ್ರವಾಗಿ ಮಾರ್ಪಾಡಾಗಲಿದೆ. ಎಲ್ಲಾ ಜನಪ್ರತಿನಿಧಿಗಳ ಪಾಲ್ಗೊಳ್ಳುವಿಕೆ ಮೂಲಕ ವಿಕೇಂದ್ರೀಕರಣ ಸಾಧ್ಯ. ಬದಲಾವಣೆಗಳನ್ನು ಜನರು ನಿರೀಕ್ಷೆ ಮಾಡುತ್ತಾರೆ. ಅವರ ಆಶೋತ್ತರಗಳಿಗೆ ತಕ್ಕಂತೆ ಕೆಲಸ ಮಾಡೋಣ ಎಂದು ಬಸವರಾಜ ಬೊಮ್ಮಾಯಿ ಹೇಳಿದರು.

> ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ತಂಡಗಳನ್ನು ರಚಿಸಿ, ಕಾಮಗಾರಿಯ ಪ್ರತಿ ಹಂತದಲ್ಲೂ ಪರಿಶೀಲನೆ ಮಾಡಿ, ಮುಂಜಾಗ್ರತಾ ಕ್ರಮವನ್ನು ತೆಗೆದುಕೊಂಡಾಗ ಮಾತ್ರ ಎಲ್ಲರೂ ಜಾಗೃತಿ ವಹಿಸುತ್ತಾರೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ನಿಗಾವಹಿಸಬೇಕು. ನಗರೋತ್ಥಾನ ಅನುದಾನ ಹೆಚ್ಚಿಗೆ ಬರಲು ಸಂಸದ ಬಸವರಾಜ ಬೊಮ್ಮಾಯಿ, ಶಾಸಕ ಸಿ.ಸಿ. ಪಾಟೀಲ ಕಾರಣರಾಗಿದ್ದಾರೆ. ಶಂಕುಸ್ಥಾಪನೆ ಮಾಡಿದ ಎಲ್ಲ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಲಿ.
>
> – ಎಚ್.ಕೆ. ಪಾಟೀಲ.
> ಜಿಲ್ಲಾ ಉಸ್ತುವಾರಿ ಸಚಿವರು.

## ಸಂಪಾದಕೀಯ

# ಈಗ ಬಸ್ ದರ ಏರಿಕೆ!

ರಾಜ್ಯ ಸರ್ಕಾರ ಮೊನ್ನೆಯಷ್ಟೇ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಹೆಚ್ಚಳ ಮಾಡಿ ಆದೇಶ ಹೊರಡಿಸಿತು. ಗ್ಯಾರಂಟಿ ಯೋಜನೆಗಳಿಗೆ ಬೇಕಾದ ಅನುದಾನ ಹೊಂದಿಸಲು ತೈಲಬೆಲೆ ಏರಿಕೆ ಅನಿವಾರ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಸ್ಪಷ್ಟಪಡಿಸಿದ್ದರು.

ಸರ್ಕಾರದ ಈ ನಿರ್ಧಾರಕ್ಕೆ ರಾಜ್ಯಾದ್ಯಂತ ವ್ಯಾಪಕ ವಿರೋಧ ವ್ಯಕ್ತವಾಗಿದೆ. ಪ್ರತಿಪಕ್ಷ ಬಿಜೆಪಿ ಬೀದಿಗೆ ಇಳಿದು ಪ್ರತಿಭಟನೆಯನ್ನು ದಾಖಲಿಸಿದೆ. ಸದ್ಯ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯ ಪರಿಣಾಮ ಒಂದೊಂದಾಗಿ ಕಾಣಿಸಿಕೊಳ್ಳಲು ಆರಂಭಿಸಿವೆ. ಅದರ ಮೊದಲ ಪರಿಣಾಮವೇ ಬಸ್ ಪ್ರಯಾಣದರ ಏರಿಕೆ.

ರಾಜ್ಯದ ಸಾರಿಗೆ ಸಂಸ್ಥೆಯ ನಾಲ್ಕು ನಿಗಮಗಳು ಡೀಸೆಲ್ ಬೆಲೆ ಹೆಚ್ಚಳವಾಗುತ್ತಿದ್ದಂತೆಯೇ ಬಸ್ ದರ ಏರಿಕೆಯ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಿವೆ. ಡೀಸೆಲ್ ಬೆಲೆ ಹೆಚ್ಚಳ ಮತ್ತು ಪ್ರಸ್ತುತ ಆರ್ಥಿಕ ಸ್ಥಿತಿಗತಿಯನ್ನ ಲೆಕ್ಕ ಹಾಕಿ ನಾಲ್ಕು ನಿಗಮಗಳು ಶೇಕಡ 25ರಷ್ಟು ಪ್ರಯಾಣದರ ಏರಿಕೆಯ ಪರಿಷ್ಕೃತ ಪ್ರಸ್ತಾವನೆಯನ್ನು ಮುಂದಿಟ್ಟಿವೆ.

ಸಾರಿಗೆ ನಿಗಮಗಳು ಈ ರೀತಿ ದರ ಏರಿಕೆ ಪ್ರಸ್ತಾವನೆ ಸಲ್ಲಿಸಿರುವುದು ಸರ್ಕಾರಕ್ಕೆ ಬಿಸಿ ತುಪ್ಪವಾಗಿ ಪರಿಣಮಿಸಿದೆ. ರಾಜ್ಯದ ಒಟ್ಟು ಪ್ರಯಾಣಿಕರ ಪೈಕಿ ಶೇಕಡ 58% ರಷ್ಟು ಮಹಿಳೆಯರೆ ಪ್ರಯಾಣಿಸುತ್ತಾರೆ. ಶಕ್ತಿ ಯೋಜನೆ ಅಡಿ ಸರ್ಕಾರವೇ ಮಹಿಳೆಯರ ಪ್ರಯಾಣದ ಶುಲ್ಕವನ್ನ ಭರಿಸುತ್ತದೆ.

ಒಂದು ವೇಳೆ ಸರ್ಕಾರ ಸಾರಿಗೆ ನಿಗಮಗಳ ದರ ಏರಿಕೆ ಪ್ರಸ್ತಾವನೆಗೆ ಒಪ್ಪಿಗೆ ಸೂಚಿಸಿದರೆ, ಶೇಕಡ 25ರಷ್ಟು ಬೆಲೆ ಹೆಚ್ಚಳ ಮಾಡಿದರೆ, ಶಕ್ತಿ ಯೋಜನೆಗೆ ಹೆಚ್ಚುವರಿಯಾಗಿ ವಾರ್ಷಿಕ 500 ರಿಂದ 600 ಕೋಟಿ ರೂಪಾಯಿ ಸರ್ಕಾರವೇ ಭರಿಸಬೇಕಾಗುತ್ತದೆ.

ರಾಜ್ಯ ಸರ್ಕಾರ ತೈಲಬೆಲೆ ಏರಿಕೆಯಿಂದ ವಾರ್ಷಿಕ 3000 ಕೋಟಿ ರೂಪಾಯಿ ಆದಾಯವನ್ನು ಹೆಚ್ಚುವರಿಯಾಗಿ ನಿರೀಕ್ಷಿಸಿದೆ. ನಿರೀಕ್ಷಿತ ಆದಾಯದ ಶೇಕಡ 20ರಷ್ಟು ಶಕ್ತಿ ಯೋಜನೆಗೆ ಹೆಚ್ಚುವರಿಯಾಗಿ ಬಳಕೆಯಾಗುತ್ತದೆ. ಆದರೆ ಜನಸಾಮಾನ್ಯರಿಗೆ ಇದರಿಂದ ಗಾಯದ ಮೇಲೆ ಬರೆ ಎಳೆದಂತಾಗುತ್ತದೆ.

ಒಂದು ಕಡೆ ನೇರವಾಗಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮತ್ತೊಂದು ಕಡೆ ಬಸ್ ಪ್ರಯಾಣ ದರವು ಏರಿಕೆ, ಸರಕು ಸಾಗಾಣಿಕೆ ವೆಚ್ಚವು ಹೆಚ್ಚಾಗಿ ಜನ ಮತ್ತಷ್ಟು ಸಂಕಷ್ಟ ಎದುರಿಸಬೇಕಾಗುತ್ತದೆ. ಸರ್ಕಾರದ ಒಂದು ನಿರ್ಧಾರ ಜನಸಾಮಾನ್ಯರ ಬದುಕಿನ ಮೇಲೆ ಹಲವು ರೀತಿಯ ಪರಿಣಾಮ ಬೀರುತ್ತದೆ ಎನ್ನುವುದಕ್ಕೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಸಾಕ್ಷಿಯಾಗಿದೆ.

### ಪ್ರೌಢಶಾಲೆಯಲ್ಲಿ ಕಲಿಸಿದ ಗುರುಗಳ ಆಶೀರ್ವಾದ ಪಡೆದ ಶಾಸಕ ಡಾ. ಚಂದ್ರು ಲಮಾಣಿ

# ಗುರುಗಳು ಕಲಿಸಿದ ಶಿಸ್ತು ಜೀವನ ರೂಪಿಸಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್

ನನ್ನ ವಿದ್ಯಾರ್ಥಿ ಜೀವನದಲ್ಲಿ ನೀವು ಕಲಿಸಿದ ಶಿಸ್ತು, ಪಾಠವೇ ಇಂದು ನಾನು ಶಾಸಕ ಸ್ಥಾನದಲ್ಲಿರಲು ಕಾರಣ. ನಿಮ್ಮ ಈ ಋಣವನ್ನು ನಾನೆಂದಿಗೂ ಮರೆಯಲಾರೆ ಎಂದು ಶಿರಹಟ್ಟಿಯ ಶಾಸಕ ಚಂದ್ರು ಲಮಾಣಿ ನುಡಿದರು.

ಶಿರಹಟ್ಟಿಯ ಶಾಸಕ ಚಂದ್ರು ಲಮಾಣಿಯವರು 2003-04ರಲ್ಲಿ ಮುಂಡರಗಿ ತಾಲೂಕಿನ ಡೋಣಿ ಸರಕಾರಿ ಪ್ರೌಢಶಾಲೆಯಲ್ಲಿ 8ರಿಂದ 10ನೇ ತರಗತಿಯವರೆಗೆ ಓದಿದವರು. ಆಗ ಅಲ್ಲಿ ದೈಹಿಕ ಶಿಕ್ಷಕರಾಗಿದ್ದವರು ಈಗ ನರೇಗಲ್ಲದ ಕೆ.ಆರ್. ಕುಲಕರ್ಣಿ ಸರಕಾರಿ ಪ್ರೌಢಶಾಲೆಯಲ್ಲಿ ದೈಹಿಕ ಶಿಕ್ಷಕರಾಗಿರುವ ಆರ್.ಎಸ್. ನರೇಗಲ್ಲರವರು. ಅವರನ್ನು ಹುಡುಕಿಕೊಂಡು ನರೇಗಲ್ಲದ ಅವರ ಮನೆಗೆ ಬಂದ ಶಾಸಕ ಚಂದ್ರು ಲಮಾಣಿ, ತಮ್ಮ ಗುರು ಭಕ್ತಿಯನ್ನು ತೋರ್ಪಡಿಸಿದ್ದು ಹೀಗೆ.

ಶಾಸಕರಾದ ನಂತರ ಬಿಡುವು ಮಾಡಿಕೊಂಡು ಗುರುವಿನ ಆಶೀರ್ವಾದ ಪಡೆಯಲು ನರೇಗಲ್ಲದ ಆರ್.ಎಸ್. ನರೇಗಲ್ಲರವರ ಮನೆಗೆ ಬಂದ ಶಾಸಕ ಚಂದ್ರು ಲಮಾಣಿ, ತಮ್ಮ ಬಾಲ್ಯದ ದಿನಗಳನ್ನು ನೆನಪು ಮಾಡಿಕೊಂಡರು.

ಮೊದಲು ನಾನು ವಿದ್ಯಾಭ್ಯಾಸದ ಬಗ್ಗೆ ಅಷ್ಟೊಂದು ಒಲವು ಹೊಂದಿರಲಿಲ್ಲ. ಮನೆಯಲ್ಲಿನ ಬಡತನದಿಂದ ನಾನು ಡೋಣಿಯ ಬಿಸಿಎಂ ಹಾಸ್ಟೆಲ್‌ನಲ್ಲಿದ್ದು ನನ್ನ ವಿದ್ಯಾಭ್ಯಾಸವನ್ನು ಮುಂದುವರೆಸಿದೆ. ನನ್ನಲ್ಲಿದ್ದ ಜಾಣತನವನ್ನು ಹೊರ ತೆಗೆದ ಆಗಿನ ಡೋಣಿ ಸರಕಾರಿ



ಪ್ರೌಢಶಾಲೆಯ ನನ್ನ ಶಿಕ್ಷಕ ಬಳಗ ನನ್ನಲ್ಲಿ ಓದುವ ಹವ್ಯಾಸವನ್ನು ಮೂಡಿಸಿತು. ಹೀಗಾಗಿ ಪ್ರೌಢಶಾಲೆಯಲ್ಲಿ ಚೆನ್ನಾಗಿ ಅಂಕಗಳನ್ನು ಪಡೆದ ನಾನು ಮುಂದೆ ಹೆಚ್ಚಿನ ಓದನ್ನು ಓದಿ ವೈದ್ಯನಾಗುವ ಹಂತಕ್ಕೂ ಬಂದೆ. ವೈದ್ಯನಾಗಿಯೂ ಸಹ ನಾನು ಸರಕಾರಿ ಆಸ್ಪತ್ರೆಯಲ್ಲಿ ಅನೇಕ ವರ್ಷಗಳ ಕಾಲ ಜನರ ಸೇವೆಯನ್ನು ಮಾಡಿದೆ. ಅಂದಿನ ಗುರುಗಳ ಮಾರ್ಗದರ್ಶನದಿಂದಲೇ ನಾನಿಂದು ಉನ್ನತ ಸ್ಥಾನವನ್ನು ತಲುಪಿದ್ದೇನೆ. ಅವರೆಲ್ಲರಿಗೂ, ವಿಶೇಷವಾಗಿ ನನಗೆ ಜೀವನದಲ್ಲಿ ಶಿಸ್ತನ್ನು ಅಳವಡಿಸಿಕೊಳ್ಳಲು ತಿಳಿಸಿದ ನಿಮಗೂ ನನ್ನ ಹೃತ್ಪೂರ್ವಕ ಅಭಿವಂದನೆಗಳು ಎಂದು ಶಾಸಕ ಚಂದ್ರು ಲಮಾಣಿ ಹೇಳಿದರು.

ಮನೆಗೆ ಬಂದ ಶಾಸಕರನ್ನು ಆದರದಿಂದ ಬರಮಾಡಿಕೊಂಡ ದೈಹಿಕ ಶಿಕ್ಷಕ ಆರ್.ಎಸ್. ನರೇಗಲ್ಲರವರು, ಕುಟುಂಬದ ಪರವಾಗಿ ಶಾಸಕರನ್ನು ಶಾಲು ಹೊದೆಸಿ ಸನ್ಮಾನಿಸಿ, ಆಶೀರ್ವದಿಸಿದರು. ಆ ಸಮಯದಲ್ಲಿ ಏನು ಮಾಡಬೇಕಿತ್ತೋ ಆ ಕರ್ತವ್ಯವನ್ನು ನಾವು ಮಾಡಿದ್ದೇವೆ. ನಮ್ಮ ಶಿಕ್ಷೆ, ದಂಡನೆಯನ್ನು ಸಹಿಸಿಕೊಂಡು ಉತ್ತಮ ಅಧ್ಯಯನ ಮಾಡಿ ಚಂದ್ರು ಲಮಾಣಿಯವರು ವೈದ್ಯರಾದರು. ಈಗ ಅವರು ಜನರ ಒಲವನ್ನು ಪಡೆದು ಶಾಸಕರಾಗಿದ್ದಾರೆ. ಉನ್ನತ ಸ್ಥಾನಗಳಿಗೆ ಹೋದ ಮೇಲೆ ಕಲಿಸಿದ ಗುರುಗಳನ್ನು ಮರೆಯುವವರು ಅದೆಷ್ಟೋ ಜನ. ಆದರೆ ಚಂದ್ರು ಲಮಾಣಿಯವರು ಶಾಸಕರಿದ್ದೂ ಸಹ ನೆನಪು ಮಾಡಿಕೊಂಡು ಬಂದು ಇಂದು ನಮ್ಮ ಆಶೀರ್ವಾದ ಪಡೆದುಕೊಂಡಿರುವುದು ಅವರ ಸರಳ ವ್ಯಕ್ತಿತ್ವವನ್ನು ತೋರಿಸುತ್ತದೆ.

> ಅಂದಿನ ದಿನಗಳಲ್ಲಿ ನೀವು ನಮ್ಮನ್ನು ಶಿಕ್ಷಿಸಿ, ಸರಿಯಾಗಿ ಶಿಸ್ತನ್ನು ಬೆಳೆಸಿದ್ದರ ಪರಿಣಾಮವಾಗಿ ನಾನು ವಿದ್ಯಾಭ್ಯಾಸದಲ್ಲಿ ವಿಶೇಷ ಆಸಕ್ತಿಯನ್ನು ಹೊಂದಿದೆ. ಇದರಿಂದ ಮೊದಲು ನಾನು ವೈದ್ಯನಾದೆ. ನಂತರ ಈಗ ಶಾಸಕನಾಗಿ ಕಾರ್ಯ ನಿರ್ವಹಿಸುತ್ತಿದ್ದೇನೆ. ಇದಕ್ಕೆಲ್ಲ ನಿಮ್ಮ ಆಶೀರ್ವಾದವೇ ಕಾರಣ ಎಂದು ಶಾಸಕ ಡಾ. ಚಂದ್ರು ಲಮಾಣಿ ನರೇಗಲ್ಲ ಶಿಕ್ಷಕರ ಕಾಲಿಗೆರಗಿದರು.

ಹಿರಿಯರನ್ನು, ಗುರುಗಳನ್ನು ಗೌರವಿಸುವ ಗುಣಗಳನ್ನು ಶಾಸಕರು ಹೊಂದಿದ್ದಾರೆ. ನಮ್ಮ ದೇಶದಲ್ಲಿ ಗುರು-ಶಿಷ್ಯ ಪರಂಪರೆಗೆ ಇನ್ನೂ ಅರ್ಥವಿದೆ ಎಂಬುದನ್ನು ಇದು ತೋರಿಸುತ್ತದೆ. ಶಾಸಕರ ಈ ಗುಣ ಅತೀವ ಸಂತಸವನ್ನುಂಟು ಮಾಡಿದೆ. ಅವರಿಗೆ ಶುಭವಾಗಲಿ ಎಂದು ಶಿಕ್ಷಕ ನರೇಗಲ್ಲ ಹಾರೈಸಿದರು.

ಈ ಸಂದರ್ಭದಲ್ಲಿ ಶಾಸಕರೊಂದಿಗೆ ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ಸುರೇಶ ಕುಂಬಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರಕಾಶ ರಟ್ಟಿಹಳ್ಳಿ, ಮುಖ್ಯ ಶಿಕ್ಷಕ ಎಸ್.ಬಿ. ನಿಡಗುಂದಿ, ಶಿಕ್ಷಕ ವಿ.ಎ. ಕುಂಬಾರ, ಪತ್ರಕರ್ತರಾದ ಉಮೇಶ ನವಲಗುಂದ, ಎನ್.ಕೆ. ಬೇವಿನಕಟ್ಟಿ ಮುಂತಾದವರಿದ್ದರು.

### ಮುಂಬೈ ವಾಯವ್ಯ ಲೋಕಸಭಾ ಫಲಿತಾಂಶ ವಿವಾದ

# ನ್ಯಾಯಾಲಯದಲ್ಲಿ ಪ್ರಶ್ನಿಸುತ್ತೇವೆ ಎಂದ ಆದಿತ್ಯ ಠಾಕ್ರೆ

■ವಿಜಯಸಾಕ್ಷಿ ಸುದ್ದಿ, ಮುಂಬೈ




ಮುಂಬೈ ವಾಯವ್ಯ ಲೋಕಸಭಾ ಕ್ಷೇತ್ರದ ಫಲಿತಾಂಶದ ಬಗ್ಗೆ ತಮ್ಮ ಪಕ್ಷವು ಕಾನೂನಿನ ಆಶ್ರಯವನ್ನು ಪಡೆಯಲಿದೆ. ಅಧಿಕೃತ ಯಂತ್ರದ ದುರುಪಯೋಗದಿಂದ ತಮ್ಮ ಅಭ್ಯರ್ಥಿಯಿಂದ ಗೆಲುವು ಕಸಿದುಕೊಳ್ಳಲಾಗಿದೆ ಎಂದು ಶಿವಸೇನಾ (ಯುಬಿಟಿ) ನಾಯಕ ಆದಿತ್ಯ ಠಾಕ್ರೆ ಸೋಮವಾರ ಹೇಳಿದ್ದಾರೆ.

ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಠಾಕ್ರೆ, "ಚುನಾವಣಾ ಅವ್ಯವಹಾರದ ಕುರಿತು ಒಂದು ಅಥವಾ ಎರಡು ದಿನಗಳಲ್ಲಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲಾಗುವುದು" ಎಂದು ಹೇಳಿದರು.

ಮುಂಬೈ ವಾಯವ್ಯ ಲೋಕಸಭಾ ಕ್ಷೇತ್ರದ ಫಲಿತಾಂಶವನ್ನು ಅವರು "ವಂಚನೆ" ಎಂದು ಹೇಳಿದರು. ಅಲ್ಲಿ ಶಿವಸೇನಾ (ಯುಬಿಟಿ) ಅಭ್ಯರ್ಥಿ ಅಮೋಲ್ ಕೀರ್ತಿಕರ್ ಅವರು ಮಹಾರಾಷ್ಟ್ರ ಮುಖ್ಯಮಂತ್ರಿ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಯ ಪ್ರತಿಸ್ಪರ್ಧಿ ರವೀಂದ್ರ ವಾಯ್ಕರ್ ವಿರುದ್ಧ 48 ಮತಗಳಿಂದ ಸೋತರು.

"ಚುನಾವಣಾ ಪ್ರಕ್ರಿಯೆ ಮತ್ತು ಇವಿಎಂಗಳ ಕುರಿತು ಚರ್ಚೆ ನಡೆಯುತ್ತಿದೆ. ಚುನಾವಣಾ ಆಯೋಗವು ಸಂಪೂರ್ಣ ರಾಜಿ ಮಾಡಿಕೊಂಡ ಆಯೋಗ ಎಂದು ನಾನು ಈಗಾಗಲೇ ಹೇಳಿದ್ದೇನೆ" ಎಂದು ಆದಿತ್ಯ ಠಾಕ್ರೆ ಹೇಳಿದರು.

ಚುನಾವಣಾ ಪ್ರಕ್ರಿಯೆಯು "ಮುಕ್ತ ಮತ್ತು ನ್ಯಾಯಯುತ"ವಾಗಿದ್ದರೆ, ಬಿಜೆಪಿ ಕೇವಲ 40 ಲೋಕಸಭಾ ಸ್ಥಾನಗಳನ್ನು ಗೆಲ್ಲುತ್ತಿತ್ತು ಮತ್ತು 240 ಅಲ್ಲ ಎಂದು ಅವರು ಪ್ರತಿಪಾದಿಸಿದರು.

"ಅಧಿಕೃತ ಮತ ಯಂತ್ರವನ್ನು ದುರುಪಯೋಗಪಡಿಸಿಕೊಂಡು ನಮ್ಮ ಗೆಲುವನ್ನು ಕಸಿದುಕೊಳ್ಳಲಾಗಿದೆ. ಮುಂಬೈ ವಾಯುವ್ಯ ಲೋಕಸಭಾ ಕ್ಷೇತ್ರದ ಫಲಿತಾಂಶವನ್ನು ಪ್ರಶ್ನಿಸಿ ನಾವು ನ್ಯಾಯಾಲಯದಲ್ಲಿ ಚುನಾವಣಾ ಅರ್ಜಿಯನ್ನು ಸಲ್ಲಿಸುತ್ತೇವೆ" ಎಂದು ಅವರು ಹೇಳಿದರು.

# ಗೋರಖ್‌ಪುರ ಪ್ರವಾಸದ ವೇಳೆ ಆದಿತ್ಯನಾಥ್ ಅವರನ್ನು ಭೇಟಿಯಾಗದ ಮೋಹನ್ ಭಾಗವತ್!

■ವಿಜಯಸಾಕ್ಷಿ ಸುದ್ದಿ, ಮುಂಬೈ



ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರು ಗೋರಖ್‌ಪುರದ ಐದು ದಿನಗಳ ಭೇಟಿಯನ್ನು ಮುಗಿಸಿದ್ದು, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರನ್ನು ಭೇಟಿಯಾಗದೆ ಇರುವುದು ಕುತೂಲ ಮೂಡಿಸಿದೆ. ಬಿಜೆಪಿ ಮತ್ತು ಆರ್‌ಎಸ್‌ಎಸ್ ನಡುವೆ ಭಿನ್ನಾಭಿಪ್ರಾಯ ಸೃಷ್ಟಿಯಾಗಿದೆ ಎನ್ನುವ ಊಹಾಪೋಹಗಳಿಗೆ ಈ ಬೆಳವಣಿಗೆ ಮತ್ತಷ್ಟು ಪುಷ್ಟಿ ನೀಡಿದೆ.

ಅವಧ್, ಕಾಶಿ, ಕಾನ್ಪುರ್ ಮತ್ತು ಗೋರಖ್‌ಪುರದಿಂದ ಆರ್‌ಎಸ್‌ಎಸ್ ಕಾರ್ಯಕರ್ತರ ಸುಮಾರು ಅರ್ಧ ಡಜನ್ ಸಭೆಗಳನ್ನು ಉದ್ದೇಶಿಸಿ ಭಾಗವತ್ ಅವರು ಮಾತನಾಡಿದ್ದಾರೆ.

ಭಾಗವತ್ ಅವರು ಗೋರಖ್‌ಪುರದ ಮಣಿರಾಮ್ ಚಿಯುತಾಹ ಪ್ರದೇಶದಲ್ಲಿ ಎಸ್.ವಿ.ಎಂ. ಪಬ್ಲಿಕ್ ಸ್ಕೂಲ್, ಆದಿತ್ಯನಾಥ್ ನೇತೃತ್ವದ ಗೋರಖನಾಥ ದೇವಸ್ಥಾನದಿಂದ ಕೇವಲ 12 ಕಿ.ಮೀ. ದೂರದಲ್ಲಿದೆ. ಆದರೆ, ಅವರು ಯಾವುದೇ ಬಿಜೆಪಿ ನಾಯಕರನ್ನು ಭೇಟಿಯಾಗಲಿಲ್ಲ, ಅಂತಹ ಭೇಟಿಯ ಎಲ್ಲ ವಿನಂತಿಗಳನ್ನು ನಯವಾಗಿ ತಿರಸ್ಕರಿಸಿದ್ದಾರೆ ಎನ್ನಲಾಗಿದೆ.

ಗೋರಖ್‌ಪುರಕ್ಕೆ ಭಾಗವತ್ ಆಗಮಿಸಿದ ದಿನವಾದ ಬುಧವಾರದಂದು ಆದಿತ್ಯನಾಥ್ ಅವರನ್ನು ಜೂನ್ 15 ರಂದು ಭೇಟಿಯಾಗಲಿದ್ದಾರೆ ಎಂದು ತಿಳಿಸಲಾಗಿತ್ತು ಎಂದು ಹಲವು ಸಂಘ ಮತ್ತು ಬಿಜೆಪಿ ಮುಖಂಡರು ಈ ಮಾಧ್ಯಮಗಳಿಗೆ ತಿಳಿಸಿದ್ದರು.

# ಪೌಷ್ಟಿಕ ಆಹಾರದ ಕಿಟ್ ವಿತರಣೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ 16ನೇ ವಾರ್ಡ್ ವ್ಯಾಪ್ತಿಯ ಸೋಮೇಶ್ವರ ನಗರ, ವಿನಾಯಕ ನಗರ ಮತ್ತು ಉಪನಾಳಗಳಿಗೆ ಸಂಬಂಧಿಸಿದಂತೆ ನೂತನವಾಗಿ ನಿರ್ಮಾಣಗೊಂಡಿರುವ ಅಂಗನ ವಾಡಿ ಕೇಂದ್ರ ಸಂಖ್ಯೆ 247ರಲ್ಲಿ ಮಂಗಳವಾರ ಮಕ್ಕಳಿಗೆ, ಗರ್ಭಿಣಿಯರಿಗೆ ಹಾಗೂ ಬಾಣಂತಿಯರಿಗೆ 16ನೇ ವಾರ್ಡಿನ ಪುರಸಭೆ ಸದಸ್ಯ ಪ್ರವೀಣ ಬಾಳಿಕಾಯಿ ಪೌಷ್ಟಿಕ ಆಹಾರದ ಕಿಟ್ ವಿತರಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಅಂಗನವಾಡಿ ಕೇಂದ್ರಗಳು ಮಕ್ಕಳಿಗೆ ಆರಂಭದಲ್ಲಿಯೇ ಸಂಸ್ಕಾರ ಕಲಿಸುವ ಕೇಂದ್ರಗಳಾಗಿವೆ. ಮುಂದಿನ ದಿನಗಳಲ್ಲಿ ಅಂಗನವಾಡಿ ಕೇಂದ್ರಗಳು ಸಮಾಜ ಗಟ್ಟಿಗೊಳಿಸುವ ಹಾಗೂ ಮಕ್ಕಳ ಭವಿಷ್ಯ ರೂಪಿಸುವ ಕೇಂದ್ರಗಳಾಗಿ ಮೂಡಿಬರಲಿ. ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಮಾನವೀಯ ಬಾಂಧವ್ಯ ವೃದ್ಧಿಸಲು ಪೂರಕವಾಗಲಿವೆ ಎಂದ ಅವರು, ಮಕ್ಕಳಿಗೆ ಪೌಷ್ಟಿಕ ಆಹಾರವನ್ನು ಸರಿಯಾಗಿ ತಲುಪಿಸುವ ಕೆಲಸ ಆಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಾಸು ಬೋಮಲೆ, ಸತೀಶ ಕಾಡಣ್ಣವರ, ಮಹಾಂತೇಶ ಗುದ್ನಾಳ, ಬದಿ, ಅಂಗನವಾಡಿ ಕಾರ್ಯಕರ್ತೆ ಶಾಂತಮ್ಮ ದೇಸಾಯಿಪಟ್ಟಿ ಸೇರಿದಂತೆ ತಾಯಂದಿರು, ಮಕ್ಕಳು ಹಾಜರಿದ್ದರು.

# ಯೋಗ ದಿನಾಚರಣೆ ಯಶಸ್ವಿಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜೂನ್ 21ರಂದು ಜಗತ್ತಿನಾದ್ಯಂತ ಯೋಗ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಪಟ್ಟಣದಲ್ಲಿ ಯೋಗಪಟುಗಳು, ಯೋಗಾಸಕ್ತರು, ಸಾರ್ವಜನಿಕರು ವಿವಿಧ ಇಲಾಖೆಗಳೊಂದಿಗೆ ಸೇರಿ ಯಶಸ್ವಿಯಾಗಿ ನಡೆಸಲು ಪಟ್ಟಣದ ಯೋಗ ಸಾಧಕರ ಸಮಿತಿ ವತಿಯಿಂದ ನಡೆದ ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು.



ಈ ವೇಳೆ ಮಾತನಾಡಿದ ಸಮಿತಿಯ ದಶರಥ ಕೋಟೆಗೌಡ್ರ, ಬಸವರಾಜ ಸಂಗಪ್ಪಶೆಟ್ಟರ, ಪ್ರಭಾವತಿ ಪುರಾಣಿಕಮಠ ವಿಶ್ವಕ್ಕೆ ಯೋಗದ ಮಹತ್ವವನ್ನು ನೀಡಿದ ಕೀರ್ತಿ ಭಾರತಕ್ಕೆ ಸಲ್ಲುತ್ತದೆ. ಆರೋಗ್ಯ ಮತ್ತು ಮನುಷ್ಯನ ಸರ್ವತೋಮುಖ ಬೆಳವಣಿಗೆಗೆ ಯೋಗ ಉತ್ತಮ ಸಾಧನೆಯಾಗಿದ್ದು, ಪ್ರಾಚೀನ ಭಾರತದ ಮಹತ್ವದ ಕೊಡುಗೆಯಾಗಿರುವ ಯೋಗ ಇಂದು ಜಗತ್ತಿನಾದ್ಯಂತ ಪ್ರಚಲಿತವಾಗಿದೆ. ಪಟ್ಟಣದಲ್ಲಿ ನೂರಾರು ಜನರು ಯೋಗ ಸಾಧಕರು, ಯೋಗ ಪಟುಗಳಿದ್ದು, ಈ ನಿಟ್ಟಿನಲ್ಲಿ ಜೂ 21ರಂದು ನಡೆಯುವ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಎಲ್ಲರನ್ನು ಸೇರಿಸುವ ಮೂಲಕ ಒಂದೆಡೆ ಸೇರಿ ಯೋಗ ದಿನವನ್ನು ಆಚರಿಸಲು ಎಲ್ಲರೂ ಆಸಕ್ತಿಯಿಂದ ಕಾರ್ಯ ಮಾಡೋಣ ಎಂದು ಹೇಳಿದರು. ಈ ಸಂದರ್ಭದಲ್ಲಿ ಪ್ರಕಾಶ ಹುಲಬಜಾರ, ನೀಲಪ್ಪ ತೆಗ್ಗಳ್ಳಿ, ಚಂದ್ರಶೇಖರ ಪಾಟೀಲ, ಪ್ರವೀಣ ಬೆನಹಾಳ, ಪಾರ್ವತಿ ಕಳ್ಳಿಮಠ, ವಿದ್ಯಾ ಗಾಂಜಿ, ಜ್ಯೋತಿ ಸುಣಗಾರ, ಶೈಲಾ ಆದಿ, ಶಕುಂತಲಾ ಜಗಳಿ, ಸೇರಿದಂತೆ ಯೋಗ ಶಿಕ್ಷಕರು, ಸಾಧಕರು ಸಭೆಯಲ್ಲಿ ಪಾಲ್ಗೊಂಡಿದ್ದರು.

### ಉದ್ಯೋಗ ನೀಡುವ ನೆಪದಲ್ಲಿ ಹಲವು ಮಹಿಳೆಯರಿಗೆ ಲೈಂಗಿಕ ದೌರ್ಜನ್ಯ

# 'ಪ್ರಬಲ ರಾಜಕಾರಣಿಗಳು ಶಾಮೀಲು' ಎಂದು ಆರ್‌ಜೆಡಿ ಆರೋಪ

■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರದ ಮುಜಾಫರ್‌ಪುರ ದಲ್ಲಿ ಆಘಾತಕಾರಿ ಪ್ರಕರಣವೊಂದು ಬೆಳಕಿಗೆ ಬಂದಿದ್ದು, 'ಉದ್ಯೋಗ ನೀಡುವ ನೆಪದಲ್ಲಿ ತಮ್ಮನ್ನು ವಂಚಿಸಲಾಗಿದೆ ಮತ್ತು ಲೈಂಗಿಕ ದೌರ್ಜನ್ಯ ಎಸಗಲಾಗಿದೆ' ಎಂದು ಹೆಚ್ಚಿನ ಸಂಖ್ಯೆಯ ಮಹಿಳೆಯರು ದೂರು ನೀಡಿದ್ದಾರೆ. ಈ ಪ್ರಕರಣದ ಕುರಿತು ಪ್ರತಿಕ್ರಿಯಿಸಿದ ರಾಷ್ಟ್ರೀಯ ಜನತಾ ದಳ (ಆರ್‌ಜೆಡಿ) ರಾಜಕೀಯ ವಲಯದ ಪ್ರಬಲ ವ್ಯಕ್ತಿಗಳ ಶಾಮೀಲಾಗಿದೆ ಎಂದು ಆರೋಪಿಸಿದ್ದು, ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದೆ.




"ಇದು ಯಾವಾಗಲೂ ನಡೆಯುತ್ತಲೇ ಇರುತ್ತದೆ; ನಮ್ಮಲ್ಲಿ ಕೆಲವು ರಾಜಕೀಯ ವ್ಯಕ್ತಿಗಳು (ಹೆಣ್ಣುಮಕ್ಕಳು) ಪೂರೈಕೆಯಲ್ಲಿ ತೊಡಗುತ್ತಾ-ರೆ, ಅವರು ಕೆಲವೊಮ್ಮೆ ಸಂಸದರಾಗುತ್ತಾರೆ, ಕೆಲವೊಮ್ಮೆ ಬಿಹಾರದ ಮಂತ್ರಿಗಳಾಗುತ್ತಾರೆ. ಅವರ ಕೆಲಸವು ಮಹಿಳೆಯರ ಸರಬರಾಜು ಮಾಡುವುದು ಮತ್ತು ಅಂತಹ ಅನುಚಿತ ವರ್ತನೆಯನ್ನು ಮಾಡುವುದು ಇದೆಲ್ಲವೂ ನಡೆಯುತ್ತದೆ. ಯಾರು ಬಿಹಾರದ ಮಂತ್ರಿಗಳಾಗುತ್ತಾರೆ ಅವರ ಆಜ್ಞೆಯ ಮೇರೆಗೆ ನಕಲಿ ಕಂಪನಿಗಳನ್ನು ಮಾಡುತ್ತಾರೆ, ಅದೇ ಜನರು ರಾಜ್ಯಸಭೆಗೆ ಹೋಗುತ್ತಾರೆ" ಎಂದು ಗಂಭೀರ ಆರೋಪ ಮಾಡಿದೆ.

ಜೆಡಿಯು ಮುಖಂಡ ನೀರಜ್ ಕುಮಾರ್ ಮಾತನಾಡಿ, ಪ್ರಕರಣ ದಾಖಲಾಗಿರುವುದು ತಿಳಿದು ಬಂದಿದ್ದು, ಪೊಲೀಸರು ಈ ಬಗ್ಗೆ ಗಮನ ಹರಿಸಿ ತನಿಖೆ ನಡೆಸುತ್ತಿದ್ದಾರೆ. ಮಹಿಳೆಯರನ್ನು ಬಂಧಿಯಾಗಿಟ್ಟುಕೊಂಡು ಲೈಂಗಿಕ ದೌರ್ಜನ್ಯ ಎಸಗಿದ 9 ಮಂದಿಯ ಮೇಲೆ ಪ್ರಕರಣ ದಾಖಲಾಗಿದೆ ಎಂದು ಹೇಳಿದ್ದಾರೆ.

### ವಯನಾಡ್‌ನಿಂದ ಪ್ರಿಯಾಂಕಾ ಕಣಕ್ಕಿಳಿಸಲು ಕಾಂಗ್ರೆಸ್ ನಿರ್ಧಾರ

# ರಾಯ್‌ಬರೇಲಿ ಕ್ಷೇತ್ರ ಉಳಿಸಿಕೊಳ್ಳಲಿರುವ ರಾಹುಲ್ ಗಾಂಧಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ರಾಹುಲ್ ಗಾಂಧಿ ತೆರವುಗೊಳಿಸಲಿರುವ ಕೇರಳದ ವಯನಾಡ್ ಲೋಕಸಭಾ ಕ್ಷೇತ್ರದಿಂದ ಪ್ರಿಯಾಂಕಾ ಗಾಂಧಿಯನ್ನು ಕಣಕ್ಕಿಳಿಸಲು ಕಾಂಗ್ರೆಸ್ ನಿರ್ಧರಿಸಿದೆ.

ಕಾಂಗ್ರೆಸ್ ಉನ್ನತ ಮಟ್ಟದ ನಾಯಕರ ಜೊತೆ ಸಭೆ ನಡೆಸಿದ ಬಳಿಕ, ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, "ಗೆದ್ದಿರುವ ಎರಡು ಕ್ಷೇತ್ರಗಳ ಪೈಕಿ ರಾಹುಲ್ ಗಾಂಧಿ ರಾಯ್‌ಬರೇಲಿಯನ್ನು ಉಳಿಸಿಕೊಳ್ಳಲಿದ್ದು, ಅವರಿಂದ ತೆರವಾಗಲಿರುವ ವಯನಾಡ್ ಕ್ಷೇತ್ರದಿಂದ ಪ್ರಿಯಾಂಕಾ ಗಾಂಧಿ ಉಪ ಚುನಾವಣೆಗೆ ಸ್ಪರ್ಧಿಸಲಿದ್ದಾರೆ" ಎಂದು ತಿಳಿಸಿದ್ದಾರೆ.

ಈ ಮೂಲಕ ಎಐಸಿಸಿ ಕಾರ್ಯದರ್ಶಿಯಾಗಿರುವ ಪ್ರಿಯಾಂಕಾ ಗಾಂಧಿ, ಚುನಾವಣಾ ರಾಜಕೀಯಕ್ಕೆ ಪ್ರವೇಶಿಸಲಿದ್ದಾರೆ.

2004ರ ಹೊತ್ತಿಗೆ ಸಕ್ರಿಯ ರಾಜಕಾರಣಕ್ಕೆ ಪಾದಾರ್ಪಣೆ ಮಾಡಿದ ಪ್ರಿಯಾಂಕಾ ಗಾಂಧಿ, 2014ರಲ್ಲಿ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾರಣಾಸಿಯಲ್ಲಿ ಎದುರಾಳಿ ಎಂದು ಬಿಂಬಿತರಾಗಿದ್ದರು. ನಂತರ ರಾಯ್‌ಬರೇಲಿಯಿಂದ ಸೋನಿಯಾ ಗಾಂಧಿಯ ಉತ್ತರಾಧಿಕಾರಿಯಾಗಿ ಸ್ಪರ್ಧಿಸುವ ಅಭ್ಯರ್ಥಿ ಎಂದು ಗುರುತಿಸಿಕೊಂಡಿದ್ದರು.

2004ರ ಸಾರ್ವತ್ರಿಕ ಚುನಾವಣೆಯಲ್ಲಿ ಸೋನಿಯಾ ಗಾಂಧಿ ರಾಯ್‌ಬರೇಲಿಯಿಂದ ಸ್ಪರ್ಧಿಸಿದ್ದರು. ಈ ವೇಳೆ ಅವರ ಪ್ರಚಾರದ ಉಸ್ತುವಾರಿಯನ್ನು ಪ್ರಿಯಾಂಕಾ ವಹಿಸಿದ್ದರು. ಅಮೇಥಿ ಮತ್ತು ರಾಯ್‌ಬರೇಲಿ ಕ್ಷೇತ್ರಗಳಿಗೆ ಆಗಾಗ ಭೇಟಿ ನೀಡುತ್ತಿದ್ದ ಪ್ರಿಯಾಂಕಾ, ಅಲ್ಲಿನ ಜನರೊಂದಿಗೆ ಉತ್ತಮ ಸಂಪರ್ಕ ಸಾಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

# ಇಸ್ರೇಲಿ ಪಡೆಗಳಿಂದ ರಾಫಾ ಮೇಲೆ ಆಕ್ರಮಣ ನಿರಾಶ್ರಿತರ ಶಿಬಿರಗಳಲ್ಲಿ ತಂಗಿದ್ದ 17 ಜನರ ದುರ್ಮರಣ

■ವಿಜಯಸಾಕ್ಷಿ ಸುದ್ದಿ, ರಾಫಾ

ಮಂಗಳವಾರ ಇಸ್ರೇಲಿ ಸೈನ್ಯ ನಡೆಸಿದ ವೈಮಾನಿಕ ದಾಳಿಗಳಿಂದ ಗಾಜಾ ಪಟ್ಟಿಯ ರಫಾ ನಿರಾಶ್ರಿತರ ಶಿಬಿರಗಳಲ್ಲಿ ತಂಗಿದ್ದ ಕನಿಷ್ಠ 17 ಪ್ಯಾಲೆಸ್ತೀನಿ ನಿರಾಶ್ರಿತರು ಅಸುನೀಗಿದ್ದಾರೆ ಎಂದು ವರದಿಯಾಗಿದೆ.

ಇಸ್ರೇಲಿ ಯುದ್ಧ ಟ್ಯಾಂಕರ್‌ಗಳು ಗಾಜಾ ದಕ್ಷಿಣ ನಗರವಾದ ರಾಫಾಗೆ ಆಳವಾಗಿ ದಾಳಿ ಇಟ್ಟಿವೆ ಎಂದು ಅಲ್ಲಿನ ನಿವಾಸಿಗಳು ಮತ್ತು ವೈದ್ಯರು ತಿಳಿಸಿದ್ದಾರೆ.

ರಫಾ ನಿವಾಸಿಗಳು ಹಲವಾರು ಪ್ರದೇಶಗಳಲ್ಲಿ ಟ್ಯಾಂಕ್‌ಗಳು ಮತ್ತು ವಿಮಾನಗಳಿಂದ ಭಾರಿ ಬಾಂಬ್ ಸ್ಫೋಟಗಳನ್ನು ವರದಿ ಮಾಡಿದ್ದಾರೆ. ಅಲ್ಲಿ ಮೇ ತಿಂಗಳ ಮೊದಲು ಒಂದು ಮಿಲಿಯನ್‌ಗಿಂತಲೂ ಹೆಚ್ಚು ಜನರು ಆಶ್ರಯ ಪಡೆದಿದ್ದರು. ಇಸ್ರೇಲಿ ಪಡೆಗಳು ನಗರವನ್ನು ಆಕ್ರಮಿಸಿದ ನಂತರ ಹೆಚ್ಚಿನ ಜನಸಂಖ್ಯೆಯು ಉತ್ತರದ ಕಡೆಗೆ ಓಡಿಹೋಗಿದ್ದಾರೆ ಎನ್ನಲಾಗಿದೆ.

"ಜಗತ್ತಿನ ಯಾವುದೇ ಹಸ್ತಕ್ಷೇಪವಿಲ್ಲದೆ ರಫಾ ಮೇಲೆ ಬಾಂಬ್ ದಾಳಿ ಮಾಡಲಾಗುತ್ತಿದೆ, ಇಸ್ರೇಲ್ ಇಲ್ಲಿ ಮುಕ್ತವಾಗಿ ಕಾರ್ಯನಿರ್ವಹಿಸುತ್ತಿದೆ" ಎಂದು ರಾಫಾ ನಿವಾಸಿಯೊಬ್ಬರು ತಿಳಿಸಿದ್ದಾರೆ ಎಂದು ಅಂತಾರಾಷ್ಟ್ರೀಯ ಮಾಧ್ಯಮಗಳು ವರದಿ ಮಾಡಿವೆ.

ಇಸ್ರೇಲಿ ಟ್ಯಾಂಕ್‌ಗಳು ರಾಫಾದ ಪಶ್ಚಿಮದಲ್ಲಿರುವ ಟೆಲ್ ಅಲ್-ಸುಲ್ತಾನ್, ಅಲ್-ಇಜ್ಬಾ ಮತ್ತು ಜುರುಬ್ ಪ್ರದೇಶಗಳಲ್ಲಿ ಮತ್ತು ನಗರದ ಹೃದಯಭಾಗದಲ್ಲಿರುವ ಶಬೌರಾದಲ್ಲಿ ಕಾರ್ಯನಿರ್ವಹಿಸುತ್ತಿದ್ದವು. ಅವರು ಪೂರ್ವದ ನೆರೆಹೊರೆ, ಹೊರವಲಯಗಳು, ಈಜಿಪ್ಟ್‌ನ ಗಡಿ ಮತ್ತು ಪ್ರಮುಖ ರಫಾ ಗಡಿ ದಾಟುವಿಕೆಯನ್ನು ಸಹ ಆಕ್ರಮಿಸಿಕೊಳ್ಳುವುದನ್ನು ಮುಂದುವರೆಸಿದರು ಎಂದು ಸ್ಥಳೀಯರು ಹೇಳಿದ್ದಾರೆ.

ಪ್ಯಾಲೇಸ್ಟಿನಿಯನ್ ಆರೋಗ್ಯ ಅಧಿಕಾರಿಗಳು ರಫಾದ ಪೂರ್ವ ಭಾಗದಲ್ಲಿ ಇಸ್ರೇಲಿ ಗುಂಡಿನ ದಾಳಿಯಿಂದ ಒಬ್ಬ ವ್ಯಕ್ತಿಯನ್ನು ಬೆಳಿಗ್ಗೆ ಕೊಲ್ಲಲಾಯಿತು. ಕಳೆದ ಕೆಲವು ದಿನಗಳು ಮತ್ತು ವಾರಗಳಲ್ಲಿ ಅನೇಕರು ಕೊಲ್ಲಲ್ಪಟ್ಟಿದ್ದಾರೆ. ಆದರೆ, ರಕ್ಷಣಾ ತಂಡಗಳು ಅವರನ್ನು ತಲುಪಲು ಸಾಧ್ಯವಾಗಲಿಲ್ಲ ಎಂದು ಹಮಾಸ್ ವೈದ್ಯರು ಹೇಳಿದರು.

### ಗುರುವಂದನಾ, ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಜೀವನ ವಿಕಾಸಕ್ಕೆ ಮೌಲ್ಯಗಳ ಸಂರಕ್ಷಣೆ ಅಗತ್ಯ

**■ವಿಜಯಸಾಕ್ಷಿ ಸುದ್ದಿ, ಸಿಂಧನೂರು**

ಆಧುನಿಕ ಯುಗದಲ್ಲಿ ಮನುಷ್ಯ ಬಹಳಷ್ಟು ಪ್ರಗತಿಯನ್ನು ಸಾಧಿಸಿದ್ದಾನೆ. ಆದರೆ ಮಾನಸಿಕ ಶಾಂತಿ ನೆಮ್ಮದಿ ಇಲ್ಲದಂತಾಗಿದೆ. ಧಾರ್ಮಿಕ ಮತ್ತು ಸಾಮಾಜಿಕ ಮೌಲ್ಯಗಳನ್ನು ಪರಿಪಾಲಿಸಿಕೊಂಡು ಬರಲಾರದಕ್ಕೆ ಈ ಪರಿಸ್ಥಿತಿ ಉಂಟಾಗಿದೆ. ಉಜ್ವಲ ಭವಿಷ್ಯ ಮತ್ತು ಉನ್ನತಿಗಾಗಿ ಮೌಲ್ಯಗಳ ಸಂರಕ್ಷಣೆ ಮತ್ತು ಪರಿಪಾಲನೆ ಅಗತ್ಯವಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಕರಿಬಸವ ನಗರದಲ್ಲಿರುವ ಬಾಳೆಹೊನ್ನೂರು ಖಾಸಾ ಶಾಖಾ ಮಠದಲ್ಲಿ ಜರುಗಿದ ಗುರುವಂದನಾ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸುಧಾರಣೆ ಮತ್ತು ವೈಚಾರಿಕತೆ ಹೆಸರಿನಲ್ಲಿ ಸಂಸ್ಕೃತಿ ನಾಶಗೊಳ್ಳಬಾರದು. ಸಂಸ್ಕಾರಯುಕ್ತ ಜೀವನದಿಂದ ಬದುಕಿನಲ್ಲಿ ಶಾಂತಿ, ನೆಮ್ಮದಿ ಪಡೆಯಲು ಸಾಧ್ಯ. ದೇಹವನ್ನು ದುಡಿಮೆಗೆ ಮತ್ತು ಮನಸ್ಸನ್ನು ಭಗವಂತನಿಗೆ ಅರ್ಪಿಸಿ ನಡೆದಾಗ ಯಶಸ್ಸು ನಿಶ್ಚಿತ. ಕಾಯಕವೇ ಕಳಾ ಚೈತನ್ಯ ಎಂದು ರೇಣುಕವಾಣಿ ನಿರೂಪಿಸಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಅಹಿಂಸಾದಿ ಧ್ಯಾನ ಪರ್ಯಂತರ ದಶ ಧರ್ಮ ಸೂತ್ರಗಳು ಜೀವನ ವಿಕಾಸಕ್ಕೆ ಅಡಿಪಾಯವಾಗಿವೆ. ಶ್ರೀ ಮಠದ ಪರಿಸರದಲ್ಲಿ ಅಭಿವೃದ್ಧಿ ಕಾರ್ಯಗಳು ಹೆಚ್ಚು ಹೆಚ್ಚಾಗಿ ನಡೆಯಲು ಭಕ್ತರು ಸಹಕರಿಸಬೇಕು. ಪ್ರತಿಭಾವಂತ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಸೋಮನಾಥ ಶ್ರೀಗಳು ಪುರಸ್ಕಾರ ನೀಡಿ ಪ್ರೋತ್ಸಾಹಿಸುತ್ತಿರುವುದು ಸಂತೋಷದ ಸಂಗತಿ ಎಂದರು.

ನೇತೃತ್ವ ವಹಿಸಿದ ಸೋಮನಾಥ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮಾನವನಿಗೊಂದು ಗುರಿ ಮತ್ತು ಗುರು ಇರಬೇಕು. ಗುರುವಿಲ್ಲದೇ ಗುರಿ ಮುಟ್ಟಲು ಸಾಧ್ಯವಾಗದು. ವೀರಶೈವ ಧರ್ಮದಲ್ಲಿ ಗುರುವಿಗೆ ಪ್ರಥಮ ಸ್ಥಾನ ಇದೆ ಎಂದರು. ಬಸವರಾಜೇಶ್ವರಿ ಶಾಶ್ವತಸ್ವಾಮಿ ಮುಕ್ಕುಂದಿಮಠ, ಪೂಜಾ ಪಾಟೀಲ, ಶಿವಕುಮಾರ ಜವಳಿ ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಪಡೆದರು.

ವೀರಶೈವ ಸಮಾಜದ ಅಧ್ಯಕ್ಷ ಪಂಪನಗೌಡ ತಾವರಗೇರಿ ಸ್ವಾಗತಿಸಿದರು. ಅಮರಯ್ಯ-ವೀರೇಶ ಇವರಿಂದ ಪ್ರಾರ್ಥನಾ ಗೀತೆ ಜರುಗಿ-ತು. ವೈಜನಾಥ ಸಗರಮಠ ನಿರೂಪಿಸಿದರು. ಸಮಾರಂಭದ ನಂತರ ಅನ್ನ ದಾಸೋಹ ಜರುಗಿತು.



ಮಸ್ಕಿ ಗಚ್ಚಿನಮಠದ ವರರುದ್ರಮುನಿ ಶಿವಾಚಾರ್ಯರು, ಕಡೇನಂದಿಹಳ್ಳಿ ಮಠದ ರೇವಣಸಿದ್ಧೇಶ್ವರ ಶಿವಾಚಾರ್ಯರು, ಹೆಬ್ಬಾಳ ಹಿರೇಮಠದ ಶಿವಪ್ರಕಾಶ ಶರಣರು, ವೆಂಕಟಗಿರಿ ಕ್ಯಾಂಪಿನ ಸದಾನಂದ ಶರಣರು, ತಲೇಖಾನ್ ವೀರಭದ್ರ ಶರಣರು ಉಪಸ್ಥಿತರಿದ್ದು ಮಾತನಾಡಿದರು.

### ಭೋಜನಾಲಯ ಕಟ್ಟಡಕ್ಕೆ ಭೂಮಿಪೂಜೆ ನೆರವೇರಿಸಿದ ಎಸ್.ವಿ. ಸಂಕನೂರ

# ನೈತಿಕ ಶಿಕ್ಷಣ ಇಂದಿನ ಅಗತ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಿಕ್ಷಣದಿಂದ ವ್ಯಕ್ತಿಯಷ್ಟೇ ಅಲ್ಲದೆ ದೇಶದ ಸರ್ವತೋಮುಖ ಅಭಿವೃದ್ಧಿ ಸಾಧ್ಯ. ಅದರಲ್ಲೂ ಹೆಣ್ಣು ಮಕ್ಕಳು ಶಿಕ್ಷಣವಂತರಾಗುವುದು ಪ್ರಗತಿಯ ದ್ಯೋತಕವೇ ಆಗಿದೆ ಎಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಅವರು ಮಂಗಳವಾರ ಪಟ್ಟಣದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗದ ಪಿಎಸ್‌ಬಿಡಿ ಬಾಲಕಿಯರ ಪ್ರೌಢಶಾಲೆಯಲ್ಲಿ ಭೋಜನಾಲಯ ಕಟ್ಟಡ ನಿರ್ಮಾಣಕ್ಕೆ ಭೂಮಿಪೂಜೆ, ಉಚಿತ ನೋಟ್‌ಬುಕ್ ವಿತರಣೆ, ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿ, ಶಾಲೆಯಲ್ಲಿ ಮಕ್ಕಳಿಗೆ ಪಠ್ಯ ಶಿಕ್ಷಣದ ಜತೆಗೆ ಮಾನವೀಯ ಮೌಲ್ಯಗಳು, ನಾಡಿನ ಸಂಸ್ಕೃತಿ, ಸಂಪ್ರದಾಯ, ಗುರು-ಹಿರಿಯರ ಬಗ್ಗೆ ಗೌರವ ಭಾವನೆ ಮೂಡಿಸುವ ನೈತಿಕ ಶಿಕ್ಷಣ ನೀಡುವದು ಅವಶ್ಯವಾಗಿದೆ. ಶಿಕ್ಷಣ ಅಂಕ ಕೇಂದ್ರಿತವಾಗಿರದೇ ಜ್ಞಾನಾಧಾರಿತ ಮತ್ತು ಜೀವನ ಶಿಕ್ಷಣ ಕಲಿಸಬೇಕು. ಈ ನಿಟ್ಟಿನಲ್ಲಿ ಪಟ್ಟಣದಲ್ಲಿ ಮಹಿಳೆಯರಿಂದಲೇ ನಡೆಯುತ್ತಿರುವ ತಾಯಿ ಪಾರ್ವತಿ ಮಕ್ಕಳ ಬಳಗದ ಕಾರ್ಯ ಶ್ಲಾಘನೀಯ ಎಂದರು.

ಈ ವೇಳೆ ವಿಶ್ವಪರಿಸರ ದಿನಾಚರಣೆ ನಿಮಿತ್ತ ಶಾಲಾ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು. ಶೈಕ್ಷಣಿಕ ಬಲವರ್ಧನೆಗಾಗಿ ಮಕ್ಕಳಿಗೆ ಉಚಿತ ನೋಟಬುಕ್ ವಿತರಣೆ ಮಾಡಲಾಯಿತು. ಸಂಸ್ಥೆಯ ಅಧ್ಯಕ್ಷೆ ಸುವರ್ಣಾಬಾಯಿ ಬಹದ್ದೂರದೇಸಾಯಿ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷೆ ರೋಹಿಣಿಬಾಯಿ ಬಹದ್ದೂರದೇಸಾಯಿ, ಜಯಲಕ್ಷ್ಮೀ ಮಹಾಂತಶೆಟ್ಟರ, ಶಾರದಕ್ಕ ಮಹಾಂತಶೆಟ್ಟರ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯಕ್, ಪ.ಪೂ ಕಾಲೇಜು ಪ್ರಾಚಾರ್ಯ ಜಾನಾನಾಯಕ, ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ, ಸಾವಂತ್ರೆಮ್ಮ ಹೂವಿನ ಮುಂತಾದವರಿದ್ದರು. ನಿರ್ಮಲಾ ಗೌರಿ, ಎಸ್.ಎಸ್. ಮಠದ, ಪಿ.ಎಲ್. ಪಾಟೀಲ ನಿರ್ವಹಿಸಿದರು.

ಶಾಸಕ ಡಾ.ಚಂದ್ರು ಲಮಾಣಿ ಮಾತನಾಡಿ, ಸಾವಿರಾರು ಮಕ್ಕಳು ಓದುತ್ತಿರುವ ಈ ಶಾಲೆಯಲ್ಲಿನ ಭೋಜನಾಲಯದ ಕೊರತೆ ನೀಗಿಸಲು ಶಾಸಕರ 4 ಲಕ್ಷ ಮತ್ತು ವಿ.ಪ. ಸದಸ್ಯರ 4 ಲಕ್ಷ ರೂಗಳ ಅನುದಾನ ಕಲ್ಪಿಸಲಾಗಿದೆ. ದೇಶದ ಭವಿಷ್ಯ ರೂಪಿಸುವ ಶ್ರೇಷ್ಠ, ಬುದ್ಧಿವಂತ ಮಕ್ಕಳನ್ನು ಸಮಾಜಕ್ಕೆ ಸಮರ್ಪಿಸುವ ಸೇವೆ ಮಾಡುವ ಶಿಕ್ಷಣ ಸಂಸ್ಥೆಗೆ ಮುಂದಿನ ದಿನಗಳಲ್ಲಿ ಅಗತ್ಯವಿರುವ ಇತರೇ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಸಹಕಾರ ನೀಡುವದಾಗಿ ಹೇಳಿದರು.

# ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನರಗುಂದ ಪುರಸಭೆ ವ್ಯಾಪ್ತಿಯಲ್ಲಿ ಬರುವ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ 2024-25ನೇ ಸಾಲಿನ ರಾಷ್ಟ್ರೀಯ ನಗರ ಜೀವನೋಪಾಯ ರಾಜ್ಯ ಅಭಿಯಾನ ಯೋಜನೆಯಡಿ ವಿವಿಧ ಉಪಘಟಕದಡಿ ಎಸ್.ಇ.ಪಿ.(ಆಯ್) ಸ್ವಯಂ ಉದ್ಯೋಗ ಕಾರ್ಯಕ್ರಮಕ್ಕೆ ಬಡ್ಡಿ ಸಹಾಯಧನ, ಸ್ವ ಸಹಾಯ ಗುಂಪು ರಚನೆ ಹಾಗೂ ಬ್ಯಾಂಕ್ ಲಿಂಕೇಜ್‌ಗೆ ಹಾಗೂ ಎ.ಎಲ್.ಎಫ್. (ಮಹಿಳಾ ಒಕ್ಕೂಟ) ಗುರಿ ನಿಗದಿಪಡಿಸಿದ್ದು, 18ರಿಂದ 45 ವರ್ಷ ವಯೋಮಿತಿಯುಳ್ಳ ಆಸಕ್ತರು ಅರ್ಜಿ ಸಲ್ಲಿಸಬಹುದು.

ಈ ಹಿಂದೆ ಪುರಸಭೆಯ ವತಿಯಿಂದ ಸದರಿ ಯೋಜನೆಯಡಿ ಸೌಲಭ್ಯ ಪಡೆದಿರಬಾರದು ಅರ್ಜಿಯನ್ನು ಸಲ್ಲಿಸಲು ಜುಲೈ 5ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ಪುರಸಭೆಯ ಡೇ-ನಲ್ಮ ವಿಭಾಗದಲ್ಲಿ ಕೇಳಿ ಪಡೆಯಬಹುದು ಎಂದು ನರಗುಂದ ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರದ ಯೋಜನೆಯಡಿಯಲ್ಲಿ ವಿದ್ಯಾರ್ಥಿ ಕ್ರೀಡಾ ಪಟುಗಳನ್ನು ಪ್ರೋತ್ಸಾಹಿಸುವ ಸಲುವಾಗಿ ಮಾಧ್ಯಮಿಕ/ ಪ್ರೌಢಶಾಲಾ ವಿದ್ಯಾರ್ಥಿ ಕ್ರೀಡಾಪಟುಗಳಿಗೆ ರೂ.10,000/- ಗಳಂತೆ ಪ್ರೋತ್ಸಾಹಿತ ಕ್ರೀಡಾ ವಿದ್ಯಾರ್ಥಿವೇತನ ನೀಡಲು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜೂನ್ 30 ಕೊನೆಯ ದಿನವಾಗಿದ್ದು, https://sevasindhuservices.karnataka.gov.in ನಲ್ಲಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

# ರೈತರಿಗೆ ನ್ಯಾಯ ಒದಗಿಸಲು ಮನವಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಎನ್.ಆರ್.ಎಲ್.ಎಮ್. ಕಾರ್ಯಕ್ರಮದ ಸಿಬ್ಬಂದಿ ಮೂಲಕ ಹಾಗೂ ಪಿ.ಜಿ ಗುಂಪುಗಳ ಮೂಲಕ ರೈತರಿಂದ ಕಡಲೆಯನ್ನು ಖರೀದಿಸಿ ಮಾಡಿಸಿ ಇನ್ನೂ ಬರಬೇಕಾದ 270 ಕೋಟಿ ರೂ. ಬಾಕಿ ಹಣವನ್ನು 6 ತಿಂಗಳಾದರೂ ರೈತರಿಗೆ ಪಾವತಿಸದೆ ಸತಾಯಿಸುತ್ತಿರುವ ಕುರಿತು ಅಂತೂರ ಬೆಂತೂರ ರೈತರು ಲೋಕಾಯುಕ್ತರಿಗೆ ಮನವಿ ಸಲ್ಲಿಸಿದರು.



ಬರಗಾಲ ಇರುವುದರಿಂದ ಒಣ ಬೇಸಾಯವಾಗಿ ವರ್ಷಕ್ಕೆ ಒಂದೇ ಬೆಳೆ ಬಂದಿದ್ದು, ಆ ಬೆಳೆಯ ಖರೀದಿಯಲ್ಲಿಯೂ ಅವ್ಯವಹಾರ ನಡೆದಿದೆ. ಈ ಅನ್ಯಾಯವನ್ನು ಸರಿಪಡಿಸಿ ರೈತರಿಗೆ ನ್ಯಾಯ ಕೊಡಿಸಬೇಕೆಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸರಸ್ವತಿ ಸಂ.ಬೆಟಗೇರಿ, ಭುವನೇಶ್ವರಿ ಚ.ನರಗುಂದ, ಲಕ್ಷ್ಮೀ ಮ.ನಾಗಿಪುಡಿ, ಲಕ್ಷ್ಮೀ ಹಿತ್ತಲಮನಿ, ಗೀತಾ ಬಾಲಪ್ಪನವರು, ಶ್ಯಾಮಲಾ ಯ. ಕರೂರ, ಎಸ್.ಪಿ. ದಾಸರ ಸೇರಿದಂತೆ ಅನೇಕ ರೈತ ಮಹಿಳೆಯರು ಉಪಸ್ಥಿತರಿದ್ದರು.

# ಪರಿಸರ ಸಂರಕ್ಷಣೆಯ ಜಾಗೃತಿ ಅವಶ್ಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ತೆ-ರಿಗೆ ಸಲಹೆಗಾರರ ಸಂಘದ ವತಿಯಿಂದ ನಗರದ ಸಂಭಾಪೂರ ರಸ್ತೆಯ ಪುಣೇಕರ ಲೇಔಟ್‌ನಲ್ಲಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಸಂಘದ ಅಧ್ಯಕ್ಷ ಎಮ್.ಎಸ್. ವಸ್ತ್ರದ ಮಾತನಾಡಿ, ದಿನದಿಂದ ದಿನಕ್ಕೆ ಪರಿಸರದ ಬಗ್ಗೆ ಕಾಳಜಿ ಕಡಿಮೆಯಾಗುತ್ತಲಿದೆ. ಪರಿಸರ ನಾಶ ಹೆಚ್ಚಾಗುತ್ತಿದ್ದು, ಸಂರಕ್ಷಣೆಯ ಕುರಿತು ಜಾಗೃತಿ ಮೂಡಿಸುವುದು ಬಹಳ ಅವಶ್ಯ ಎಂದರು.

ಹಿರಿಯ ತೆರಿಗೆ ಸಲಹೆಗಾರ ಬಸವರಾಜ ಶೆಲ್ಲಿಕೇರಿ ಮಾತನಾಡಿ, ಹಬ್ಬ ಹರಿದಿನ, ಶುಭ ಸಮಾರಂಭಗಳ ಸವಿನೆನಪಿಗಾಗಿ ಗಿಡಮರಗಳನ್ನು ಬೆಳೆಸುವುದನ್ನು ರೂಢಿ ಮಾಡಿಕೊಳ್ಳಬೇಕು. ಕಪ್ಪತ್ತಗುಡ್ಡ ಪ್ರದೇಶದಿಂದ ಗದಗ ನಗರ ಶುದ್ಧ ಗಾಳಿಗೆ ಹೆಸರುವಾಸಿಯಾಗಿದೆ. ಆ ಹೆಸರನ್ನು ನಿರಂತರ ಉಳಿಸುವ ಕೆಲಸ ನಮ್ಮೆಲ್ಲರಿಂದ ಆಗಬೇಕು ಎಂದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ಚೇತನ ಅಂಗಡಿ, ಉಪಾಧ್ಯಕ್ಷ ಸಿದ್ದು ಕಲ್ಲನಗೌಡರ, ಜಂಟಿ ಕಾರ್ಯದರ್ಶಿ ಕುಮಾರ ಶೆಲ್ಲಿಕೇರಿ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

# ಶ್ರೀ ಶರಣಬಸವೇಶ್ವರರಿಗೆ ವಿಶೇಷ ಪೂಜೆ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಶ್ರೀ ಸುಕ್ಷೇತ್ರ ಬೆಳಧಡಿ ಬ್ರಾಹ್ಮಾನಂದಪುರದ ಶ್ರೀ ಶರಣ ಬಸವೇಶ್ವರ ದೇವಸ್ಥಾನದಲ್ಲಿ ಶ್ರೀ ಶರಣಬಸವೇಶ್ವರ ಟ್ರಸ್ಟ್ ಕಮಿಟಿ ಹಾಗು ಶ್ರೀ ಸೇವಾಲಾಲ ಯುವಕ ಸಂಘ ಬೆಳಧಡಿ ತಾಂಡಾ ಇವರುಗಳು ಸಂಯುಕ್ತಾಶ್ರಯದಲ್ಲಿ ಶ್ರೀ ಶರಣಬಸವೇಶ್ವರ ಶರಣರಿಗೆ ರುದ್ರಾಭಿಷೇಕ, ಮಯೂರ ಪೂಜೆ ನೆರವೇರಿಸಲಾಯಿತು.



ವೇದಮೂರ್ತಿ ಜಗದೇವಯ್ಯ ನರೆಗಲಮಠ ಮಾತನಾಡಿ, ಹಿಂದೂ ಸಂಸ್ಕೃತಿಯಲ್ಲಿ ಪ್ರಮುಖವಾಗಿ ಗೌರವಿಸಲ್ಪಡುವ ನಮ್ಮ ರಾಷ್ಟ್ರೀಯ ಪಕ್ಷಿ ನವಿಲು. ದೇವಾಲಯದ ಕಲೆ, ಪುರಾಣ, ಕಾವ್ಯ, ವಿದ್ಯೆ, ಜಾನಪದ ಸಂಗೀತ ಸೇರಿದಂತೆ ಬಹುತೇಕ ಸಾಂಪ್ರದಾಯಿಕ ಪದ್ಧತಿಗಳಲ್ಲಿ ನವಿಲಿನ ಪಾತ್ರವಿದೆ. ಮಯೂರ ಈ ದೇವಸ್ಥಾನಕ್ಕೆ ಆಗಮಿಸಿ ಶರಣರ ಮೂರ್ತಿಯ ಮೇಲೆ ಕುಳಿತು ನೃತ್ಯ ಮಾಡಿದ್ದು ದೈವಿಕತೆಯ ವಿಶೇಷತೆಯನ್ನೂ ತೋರುವಂತಿದೆ ಎಂದರು.

ಲೋಕಪ್ಪ ಕಾರಭಾರಿ ಹಾಗೂ ಸಂಗಡಿಗರು ಭಜನೆಯೊಂದಿಗೆ ಪ್ರಾರ್ಥಿಸಿದರು. ದೇವಸ್ಥಾನದ ಅರ್ಚಕರಾದ ದೇವಾನದ ಮಾಳಗಿಮನಿಯವರ ಸಾರಥ್ಯದಲ್ಲಿ ವಿಶೇಷ ಪೂಜೆ ಸಲ್ಲಿಸಿ, ತಾಂಡಾದ ಸುಮಂಗಲಿಯರಿಗೆ ಉಡಿ ತುಂಬುವ ಕಾರ್ಯಕ್ರಮ, ಮಹಾ ಅನ್ನಸಂತರ್ಪಣೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಚಂದು ನಾಯಕ, ಮಲ್ಲೇಶ ಕಾರಭಾರಿ, ಪಾಂಡಪ್ಪ ಪೂಜಾರ, ಕುಬೇರಪ್ಪ ಪವಾರ, ತಿಪ್ಪಣ್ಣ ಬೇವಿನಕಟ್ಟಿ, ಉಮೇಶ ಡೋಣಿ, ನಾರಾಯಣ ಪೂಜಾರ, ರಾಮಚಂದ್ರ ತುಳಸಿಮನಿ, ಶಿವಪ್ಪ ನಾಯಕ, ಪಾಂಡು ಚವ್ಹಾಣ, ಹೇಮಂತ ಬೇವಿನಕಟ್ಟಿ, ಗೋವಿಂದ ಡೋಣಿ, ಮೇಘರಾಜ ತುಳಸಿಮನಿ, ನಾರಾಯಣ ಪವಾರ, ಭೀಮಪ್ಪ ನಾಯಕ, ಈಶ್ವರ ಹೊಸಮನಿ, ಶಂಕರ ನಾಯಕ, ವೆಂಕಟೇಶ ಹಾದಿಮನಿ, ರವಿರಾಜ್ ಪವಾರ, ತಾವರೆಪ್ಪ ಚವಾಣ, ಹುಸೇನ್ ತಂಬೂರಿ, ಉಮೇಶ ಮಾಳಗಿಮನಿ, ಅನಿಲ ಮಾಳಗಿಮನಿ, ಲಕ್ಷಣ ಚವ್ಹಾಣ ಮುಂತಾದವರಿದ್ದರು.

# ಲೈಂಗಿಕ ದೌರ್ಜನ್ಯ ಪ್ರಕರಣ: ಪ್ರಜ್ವಲ್ ರೇವಣ್ಣ ನ್ಯಾಯಾಂಗ ಬಂಧನ 14 ದಿನ ವಿಸ್ತರಣೆ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಲೈಂಗಿಕ ಕಿರುಕುಳ ಮತ್ತು ಅತ್ಯಾಚಾರ ಪ್ರಕರಣದಲ್ಲಿ ಎಸ್‌ಐಟಿ ಬಂಧಿಸಿರುವ ಜೆಡಿಎಸ್ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರ ನ್ಯಾಯಾಂಗ ಬಂಧನವನ್ನು ಬೆಂಗಳೂರು ನ್ಯಾಯಾಲಯ ಮಂಗಳವಾರ ವಿಸ್ತರಿಸಿದೆ. ಜನಪ್ರತಿನಿಧಿಗಳ 42ನೇ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ (ಎಸಿಎಂಎಂ) ವಿಶೇಷ ನ್ಯಾಯಾಲಯವು ಅವರ ನ್ಯಾಯಾಂಗ ಬಂಧನದ ಅವಧಿ ವಿಸ್ತರಣೆಯನ್ನು ಘೋಷಿಸುತ್ತದೆ.

ವಿಶೇಷವೆಂದರೆ, ಏಪ್ರಿಲ್ 28 ರಂದು ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿ ಅವರ ವಿರುದ್ಧ ದಾಖಲಾಗಿದ್ದ ಪ್ರಕರಣದಲ್ಲಿ ಅವರನ್ನು ಬಂಧಿಸಲಾಯಿತು. 47 ವರ್ಷದ ಮಾಜಿ ಮನೆಕೆಲಸದಾಕೆಗೆ ಲೈಂಗಿಕ ಕಿರುಕುಳ ನೀಡಿದ ಆರೋಪವಿದೆ.

ರೇವಣ್ಣ ಅವರನ್ನು ಆರೋಪಿ ಸಂಖ್ಯೆ 2 ಎಂದು ಪಟ್ಟಿ ಮಾಡಲಾಗಿದ್ದು, ಅವರ ತಂದೆ ಮತ್ತು ಶಾಸಕ ಎಚ್ ಡಿ ರೇವಣ್ಣ ಪ್ರಮುಖ ಆರೋಪಿಯಾಗಿದ್ದಾರೆ. ಪ್ರಕರಣ ಬೆಳಕಿಗೆ ಬರುವ ವೇಳೆಗೆ ರೇವಣ್ಣ ಅವರು ದೇಶ ತೊರೆದಿದ್ದರು ಮತ್ತು ಮೇ 31 ರಂದು ಭಾರತ-ಕ್ಕೆ ಆಗಮಿಸಿದ ಹಿನ್ನೆಲೆಯಲ್ಲಿ ಅವರನ್ನು ಬಂಧಿಸಲಾಗಿತ್ತು. ಹಾಸನದಲ್ಲಿ ಮತದಾನ ನಡೆದ ಒಂದು ದಿನದ ನಂತರ ಅವರು ಏಪ್ರಿಲ್ 27 ರಂದು ಜರ್ಮನಿಗೆ ತೆರಳಿದ್ದರು.

# ಯೋಜನೆಯ ಸ್ಪಷ್ಟತೆಯರಿತು ಕಾರ್ಯನಿರ್ವಹಿಸಿ

▶▶ಮೊದಲನೇ ಪುಟದಿಂದ

ಈಗಾಗಲೇ ಮಳೆಗಾಲ ಆರಂಭವಾಗಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು. ಈ ಕುರಿತು ತಹಸೀಲ್ದಾರರು ಹಾಗೂ ತಾ.ಪಂ ಕಾರ್ಯನಿರ್ವಹಣಾಧಿಕಾರಿಗಳು, ನೀರಾವರಿ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ಜರುಗಿಸಿ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಕೃಷಿ ಇಲಾಖೆ ಹಾಗೂ ಸಹಕಾರ ಇಲಾಖೆಗಳು ಸಮನ್ವಯ ಸಾಧಿಸುವಂತೆ ಜಿಲ್ಲಾಧಿಕಾರಿಗಳು ನಿಗಾ ವಹಿಸಬೇಕು. ಸಹಕಾರ ಸಂಘಗಳ ಮೂಲಕ ರೈತರಿಗೆ ಬಿತ್ತನೆ ಬೀಜ ಗೊಬ್ಬರ ಸರಬರಾಜು ಆಗಬೇಕು. ನಗರದ ಕುಡಿಯುವ ನೀರಿನ ಪೂರೈಕೆಯಲ್ಲಿ ಆಗುತ್ತಿರುವ ವ್ಯತ್ಯಯವನ್ನು ಸರಿಪಡಿಸಲು ಜಿಲ್ಲಾಧಿಕಾರಿಗಳು ವಾರಕ್ಕೊಂದು ಸಾರಿಯಾದರೂ ಸಂಬಂಧಿಸಿದ ಇಲಾಖೆಗಳ ಮುಖ್ಯಸ್ಥರೊಂದಿಗೆ ಸಭೆ ಜರುಗಿಸಿ ಸಮರ್ಪಕ ಕುಡಿಯುವ ನೀರಿನ ಪೂರೈಕೆಯಾಗುತ್ತಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದರು.

ನರಗುಂದ ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಜೆಜೆಎಂ ಯೋಜನೆಯಡಿ ಸಮರ್ಪಕ ನೀರು ಸರಬರಾಜಿನ ಕುರಿತು ಪರಿಶೀಲನೆ ನಡೆಸಬೇಕು. ಪೈಪ್ ಒಡೆದು ನೀರು ಪೋಲಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ ಮಾತನಾಡಿ, ಜಿಲ್ಲೆಯಲ್ಲಿ ಬಿತ್ತನೆ ಪ್ರದೇಶದ ಶೇ. 65ರಷ್ಟು ಬಿತ್ತನೆಯಾಗಿದೆ. ಜಿಲ್ಲೆಯಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜದ ಅಭಾವವಿಲ್ಲ ಎಂದು ಸಭೆಗೆ ತಿಳಿಸಿದರು. ಕಳಪೆ ಗುಣಮಟ್ಟದ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟಗಾರರಿದ್ದರೆ ಅಂತಹವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬೇಕು. ರೈತರಿಗಿರುವ ಯೋಜನೆಗಳನ್ನು ವಿಳಂಬ ಮಾಡದೇ ಅವರಿಗೆ ದೊರಕಿಸಿದರೆ ನ್ಯಾಯ ಒದಗಿಸಿದಂತಾಗುತ್ತದೆ ಎಂದು ಸಂಸದರು ಹೇಳಿದರು.

ಸಭೆಯಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಶಾಸಕ ಚಂದ್ರು ಲಮಾಣಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಉಪ ಅರಣ್ಯ ಸಂರಕ್ಷಣಾಧಿಕಾರಿ ಲೇಖರಾಜ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪಿ.ವೈ. ಶೆಟ್ಟೆಪ್ಪನವರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಇಂದು ಮಾವು ಬೆಳೆಗಾರರಿಗೆ ತರಬೇತಿ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಮಾವು ಬೆಳೆಗಾರರಿಗೆ ಜೂನ್ 19 ರಂದು ಮುಂಜಾನೆ 10.30 ಘಂಟೆಗೆ ಕೆ.ವಿ.ಕೆ ಹುಲಕೋಟಿ ಕೇಂದ್ರದಲ್ಲಿ ಮಾವು ಬೆಳೆಯಲ್ಲಿ ಆಧುನಿಕ ತಂತ್ರಜ್ಞಾನ ಅಳವಡಿಕೆ ಕುರಿತು ಹಾಗೂ ಮಧ್ಯಾಹ್ನ 3 ಗಂಟೆಗೆ ಶಿರಹಟ್ಟಿ ತಾಲೂಕಿನ ಕಡಕೋಳ ಗ್ರಾಮದ ದೇವರಡ್ಡಿ ಅಗಸನಕೊಪ್ಪ ಅವರ ಮಾವಿನ ತೋಟದಲ್ಲಿ ಪ್ರಾತ್ಯಕ್ಷತೆಯ ಮೂಲಕ ತರಬೇತಿ ಕಾರ್ಯಾಗಾರ ಏರ್ಪಡಿಸಲಾಗಿದೆ.

ತರಬೇತಿ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯ ಮಾವು ಬೆಳೆಗಾರರು ಹಾಜರಾಗಿ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕೆಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಮಗಾರಿಗಳ ಗುಣಮಟ್ಟ ಉತ್ಕೃಷ್ಟವಾಗಿರಲಿ

▶▶ಮೊದಲನೇ ಪುಟದಿಂದ

ಅಧಿಕಾರದ ಚುಕ್ಕಾಣಿ ಹಿಡಿಯುವಲ್ಲಿ ಪಕ್ಷಗಳು ಬೇರೆ ಬೇರೆಯಾಗುತ್ತವೆ ಆದರೆ ಸರ್ಕಾರದ ಕಾರ್ಯಗಳು ನಿರಂತರ ನಡೆಯುವ ವ್ಯವಸ್ಥೆ. ನಾವು ಒದಗಿಸಿದ ಅನುದಾನದ ಕಾಮಗಾರಿಗಳ ಆಡಳಿತಾತ್ಮಕ ದೋಷಗಳನ್ನು ಸರಿಪಡಿಸಿಕೊಂಡು ಸಮಯಕ್ಕೆ ಸರಿಯಾಗಿ ಆರಂಭವಾಗಿ ಮುಕ್ತಾಯಗೊಂಡಾಗ ಇನ್ನೂ ಹೆಚ್ಚು ಅಭಿವೃದ್ಧಿ ಕೆಲಸ ಮಾಡಲು ಸಹಾಯಕವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ನಗರಸಭೆ ಅಧ್ಯಕ್ಷೆ ಉಷಾ ದಾಸರ ಮಾತನಾಡಿ, ನಗರೋತ್ಥಾನ ಕಾಮಗಾರಿ ಕೈಗೊಳ್ಳಲು ಅನುದಾನ ನೀಡಿದ ಬಸವರಾಜ ಬೊಮ್ಮಾಯಿ, ಸಿ.ಸಿ. ಪಾಟೀಲ ಅವರಿಗೆ ಧನ್ಯವಾದ ತಿಳಿಸಿದರಲ್ಲದೆ, ಈ ಅನುದಾನದಿಂದ ತಾವು ಜನರಿಗೆ ನೀಡಿದ ಆಶ್ವಾಸನೆಗಳನ್ನು ಈಡೇರಿಸಲು ಸಹಕಾರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಸಕ ಸಿ.ಸಿ. ಪಾಟೀಲ್, ಡಾ. ಚಂದ್ರು ಲಮಾಣಿ, ಎಸ್.ವಿ. ಸಂಕನೂರು, ಉಪಾಧ್ಯಕ್ಷೆ ಸುನಂದಾ ಬಾಕಳೆ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್, ನಗರ ಸಭೆ ವಿರೋಧ ಪಕ್ಷದ ನಾಯಕ ಎಲ್.ಡಿ. ಚಂದಾವರಿ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್., ನಗರಸಭೆ ಪೌರಾಯುಕ್ತ ಪ್ರಶಾಂತ ವರಗಪ್ಪನವರ, ಮಾರುತಿ ಬ್ಯಾಕೊಡ್ ಸೇರಿದಂತೆ ನಗರಸಭೆಯ ಸದ್ಯಸರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಹಾಜರಿದ್ದರು.

# ಕಲಾವಿದರ ಗುರುತಿನ ಚೀಟಿಗಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಎಲ್ಲ ಕಲಾವಿದರಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ನೈಜ ಕಲಾವಿದರುಗಳ ಪಟ್ಟಿಯನ್ನು ತಯಾರಿಸಲು ಹಾಗೂ ಗುರುತಿನ ಚೀಟಿಯನ್ನು ನೀಡಲು ಜಿಲ್ಲೆಯ ಎಲ್ಲ ಕಲಾವಿದರು ತಮ್ಮ ಹಾಗೂ ತಮ್ಮ ತಂಡದ ಎಲ್ಲ ಸಹ ಕಲಾವಿದರ (ಕಳೆದ ಬಾರಿ ದತ್ತಾಂಶ ಸಂಗ್ರಹಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಕಲಾವಿದರನ್ನು ಹೊರತುಪಡಿಸಿ) ದಾಖಲೆಗಳ ಸಮೇತ ಮಾಹಿತಿಯನ್ನು ನಿಗದಿತ ಅರ್ಜಿ ನಮೂನೆಯಲ್ಲಿ ಜೂನ್ 24 ರೊಳಗಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಕಚೇರಿಗೆ ಕಡ್ಡಾಯವಾಗಿ ಸಲ್ಲಿಸಿ ನೋಂದಣಿ ಮಾಡಿಸಿಕೊಳ್ಳಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ದೂರವಾಣಿ ಸಂಖ್ಯೆ : 08372-221864 ಸಂಪರ್ಕಿಸಬಹುದಾಗಿದೆ.

# ಉತ್ತಮ ಪುಸ್ತಕಗಳು ಜೀವನದ ಮಾರ್ಗದರ್ಶಿ



■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತಮ ಪುಸ್ತಕಗಳು ಮೌಲ್ಯಾಧಾರಿತ ಆದರ್ಶ ಜೀವನವನ್ನು ಹೇಗೆ ನಡೆಸಬೇಕು ಎಂಬುದನ್ನು ಹೇಳಿಕೊಡುವ ಮಾರ್ಗದರ್ಶಿಗಳಾಗಿವೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ನುಡಿದರು.

ಅವರು ಮಂಗಳವಾರ ಗದಗ ಜಿಲ್ಲಾ ಕಾರಾಗೃಹದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ರಾಜ್ಯಧ್ವನಿ ಮಹಿಳಾ ಮತ್ತು ಮಕ್ಕಳ ಸಂಸ್ಥೆ ಮದ್ದೂರು ಹಾಗೂ ಜಿಲ್ಲಾ ಕಾರಾಗೃಹ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರಾಗೃಹ ಬಂಧಿಗಳಿಗೆ ಮನ ಪರಿವರ್ತನೆಗಾಗಿ ಸಾಹಿತ್ಯದ ಪುಸ್ತಕ ಹಾಗೂ ಮಹಿಳಾ ಬಂದಿಗಳಿಗೆ ವಸ್ತ್ರದಾನ ಕಾರ್ಯಕ್ರಮದ ಅಂಗವಾಗಿ ಕಾನೂನು ಸಾಕ್ಷರತಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿಚಾರಣಾಧೀನ ಖೈದಿಗಳ ಮನಃಪರಿವರ್ತನೆಗಾಗಿ ಪುಸ್ತಕಗಳನ್ನು ವಿತರಿಸಿದ್ದು, ಖೈದಿಗಳು ಪುಸ್ತಕಗಳನ್ನು ಓದುವ ಮೂಲಕ ಅದರ ವಿಚಾರಧಾರೆಗಳನ್ನು, ಆದರ್ಶಗಳನ್ನು ಮೈಗೂಡಿಸಿಕೊಳ್ಳಬೇಕು. ಜೈಲಿನಿಂದ ಹೊರಬಂದ ನಂತರ ಉತ್ತಮವಾದ ಜೀವನ ನಡೆಸಬೇಕು. ಈ ಹಿನ್ನೆಲೆಯಲ್ಲಿ ಧ್ವನಿ ಮಹಿಳಾ ಮತ್ತು ಮಕ್ಕಳ ಸಂಸ್ಥೆಯು ಸಾಮಾಜಿಕ ಕಳಕಳಿಯಿಂದ ಪುಸ್ತಕಗಳನ್ನು ವಿತರಿಸಿದೆ. ಇದರ ಸದುಪಯೋಗ ಪಡೆದುಕೊಳ್ಳುವ ಮೂಲಕ ಬಿಡುಗಡೆಯ ಬಳಿಕ ಉತ್ತಮ ಜೀವನ ನಡೆಸಿ ಎಂದರು.

ಧ್ವನಿ ಮಹಿಳಾ ಮತ್ತು ಮಕ್ಕಳ ಸಂಸ್ಥೆಯ ಮಂಡ್ಯ ಜಿಲ್ಲಾಧ್ಯಕ್ಷೆ ರಜನಿ ರಾಜ್ ಮಾತನಾಡಿ, ಸಂಸ್ಥೆಯ ವತಿಯಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಖೈದಿಗಳಿಗೆ ಪುಸ್ತಕಗಳನ್ನು ವಿತರಿಸಿದ್ದು, ಖೈದಿಗಳು ಪುಸ್ತಕಗಳನ್ನು ಓದುವ ಮೂಲಕ ಸಮಾಜದಲ್ಲಿ ಉತ್ತಮ ನಾಗರಿಕರಾಗಬೇಕು ಎಂದರು. ಸಂಸ್ಥೆಯ ಗದಗ ಜಿಲ್ಲಾಧ್ಯಕ್ಷರಾದ ಸುಗುಲಾ ಎಸ್. ಯಳಮಲಿ ಹಾಗೂ ಜಿಲ್ಲಾ ಕಾರಾಗೃಹದ ಅಧೀಕ್ಷಕರಾದ ಎಚ್.ಎ. ಚೌಗಲೆ ಮಾತನಾಡಿದರು.

ವೇದಿಕೆಯಲ್ಲಿ ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ, ಹೆಚ್ಚುವರಿ ಪೊಲೀಸ್ ಉಪಾಧೀಕ್ಷಕ ಎಂ.ಬಿ. ಸಂಕದ, ಲಯನ್ಸ್ ಕ್ಲಬ್‌ಅಧ್ಯಕ್ಷ ಸತೀಶ ಶಾಬಾದಿಮಠ ಉಪಸ್ಥಿತರಿದ್ದರು. ಶಿರಸ್ತೆದಾರ ಬಿ.ಎಂ. ಕುಕನೂರ ಸ್ವಾಗತಿಸಿ, ನಿರೂಪಿಸಿ, ವಂದಿಸಿದರು.

# ಯೋಗದಿಂದ ಉತ್ತಮ ಆರೋಗ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ನಿತ್ಯ ಯೋಗಾಭ್ಯಾಸದಿಂದ ಮಾತ್ರ ಉತ್ತಮ ಆರೋಗ್ಯ ಸಾಧ್ಯ. ನಿರಂತರ 10 ವರ್ಷದಿಂದ ಜಗತ್ತಿಗೆ ಯೋಗವನ್ನು ಪರಿಚಯಿಸಿ ವಿಶ್ವ ಗುರುವಾದ ಭಾರತ ವಿಶ್ವಕ್ಕೆ ಆರೋಗ್ಯವನ್ನು ಕೊಟ್ಟಿದೆ. ಜೂನ್ 21ಕ್ಕೆ ವಿಶ್ವ ಯೋಗ ದಿನಾಚರಣೆಯನ್ನು ಆಚರಿಸುತ್ತಿದ್ದು, ದೈನಂದಿನ ಬದು ಕಿನಲ್ಲಿ ಯೋಗಕ್ಕೆ ಸ್ವಲ್ಪ ಸಮಯವನ್ನು ಕೊಟ್ಟು ಆರೋಗ್ಯವನ್ನು ಸದೃಢವಾಗಿಸಿಕೊಳ್ಳಬೇಕು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಎಮ ್.ಎಸ್. ಉಪ್ಪಿನ ಅಭಿಪ್ರಾಯಪಟ್ಟರು.

ನಗರದ ಶ್ರೀ ವಿಶ್ವೇಶ್ವರಯ್ಯ ಬಡಾವಣೆಯಲ್ಲಿ ಜಿಲ್ಲಾ ಆಯುಷ್ ಇಲಾಖೆ, ಶ್ರೀರಾಮ ವಾಯುವಿಹಾರಿಗಳ ಸಂಘ ಮತ್ತು ಶ್ರೀ ವಿಘ್ನೇಶ್ವರ ಸೇವಾ ಸಮಿತಿ ಸಂಯಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ೦ ೋಗಮಹೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಯೋಗ ಗುರುಗಳಾದ ಕೆ.ಎಸ್. ಪಲ್ಲೇದ ಯೋಗಾಸಕ್ತ ಬಂಧುಗಳಿಗೆ ಹಾಗೂ ಬಡಾವಣೆಯ ಜನತೆಗೆ ವಿವಿಧ ಆಸನಗಳ ಪ್ರಾತ್ಯಕ್ಷಿಕೆಯನ್ನು ಮಾಡಿಸಿ ಮಾತನಾಡುತ್ತಾ, ಯೋಗದಿಂದ ಮನಸ್ಸು ಸದೃಢಗೊಳ್ಳುವುದು. ಯೋಗ ಒಂದು ಸಾಧನೆ.

ಈ ಸಾಧನೆಯನ್ನು ಯಾರು ಕರಗತ ಮಾಡಿಕೊಳ್ಳುತ್ತಾರೋ ಅವರು ಬದುಕಿನಲ್ಲಿ ಎಲ್ಲವನ್ನೂ ಜಯಿಸುವರು ಎಂದರು.

ಡಾ. ಕಲ್ಲೇಶ ಮೂರಶಿಳ್ಳಿನ ಕಾರ್ಯಕ್ರಮ ನಡೆಸಿಕೊಟ್ಟರು. ಗೌಡಪ್ಪ ಬೊಮ್ಮಪ್ಪನವರ ವಂದಿಸಿದರು.

# ಜೂ. 30ರಂದು ಶಿಕ್ಷಕರ ಅರ್ಹತಾ ಪರೀಕ್ಷೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಪೂರ್ವದಲ್ಲಿ ಶಿಕ್ಷಕರ ಅರ್ಹತೆ ಪರೀಕ್ಷೆ ಟಿಇಟಿ-2024 ನ್ನು ಜೂನ್ 30 ರಂದು ಗದಗ ಜಿಲ್ಲಾ ಕೇಂದ್ರದ 17 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುತ್ತದೆ.

ಪ್ರಥಮ ಅಧಿವೇಶನಕ್ಕೆ ಒಟ್ಟು 2716 ಮತ್ತು ದ್ವಿತೀಯ ಅಧಿವೇಶನಕ್ಕೆ ಒಟ್ಟು 4612 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆ ಬರೆಯುವ ಅಭ್ಯರ್ಥಿಗಳು ಪರೀಕ್ಷಾ ದಿನಾಂಕದಂದು ಅರ್ಧ ಗಂಟೆ ಮುಂಚಿತವಾಗಿ ಪರೀಕ್ಷಾ ಕೇಂದ್ರದಲ್ಲಿ ಹಾಜರಿರಬೇಕೆಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ. 21ರಂದು ಗಜೇಂದ್ರಗಡದಲ್ಲಿ ಜನಸ್ಪಂದನ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗಜೇಂದ್ರಗಡ ಪಟ್ಟಣದ ಟಿ.ಟಿ.ಡಿ ಕಲ್ಯಾಣಮಂಟಪದಲ್ಲಿ ಜೂನ್ 21ರಂದು ಮಧ್ಯಾಹ್ನ 3-00 ಗಂಟೆಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಗಜೇಂದ್ರಗಡ ತಾಲೂಕಿನಲ್ಲಿ ಜನಸ್ಪಂದನ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಗಜೇಂದ್ರಗಡ ತಾಲೂಕಿನ ಸಾರ್ವಜನಿಕರು ತಮ್ಮ ಕುಂದು-ಕೊರತೆಗಳನ್ನು ಲಿಖಿತ ರೂಪದಲ್ಲಿ ದಾಖಲೆಗಳ ಸಮೇತ ಅರ್ಜಿಗಳನ್ನು ಸಲ್ಲಿಸಿ ಜನಸ್ಪಂದನ ಕಾರ್ಯಕ್ರಮದ ಸದುಪಯೋಗ ಪಡೆಯಲು ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂನ್ 20ರಿಂದ ಜೇವರ್ಗಿ ನಾಟಕ ಕಂಪನಿಯಿಂದ ನಾಟಕ ಪ್ರದರ್ಶನ: ರಾಜಣ್ಣ ಜೇವರ್ಗಿ ಮಾಹಿತಿ

# ನಾಟಕ ಕಲೆಯನ್ನು ಪ್ರೋತ್ಸಾಹಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಜ್ಯೋತಿ ಶ್ರೀ ಪಂಚಾಕ್ಷರ ನಾಟ್ಯ ಸಂಘ ಜೇವರ್ಗಿ ನಾಟಕ ಕಂಪನಿಯಿಂದ ಜೂನ್ 20ರಿಂದ 'ಗಂಗಿ ಮನ್ಯಾಗ ಗೌರಿ ಹೊಲದಾಗ' ಎನ್ನುವ ಸಾಮಾಜಿಕ ನಾಟಕ ಪ್ರದರ್ಶನ ಆರಂಭವಾಗಲಿದ್ದು, ನಾಟಕ ಪ್ರಾರಂಭೋತ್ಸವದ ದಿವ್ಯ ಸಾನ್ನಿಧ್ಯವನ್ನು ಶ್ರೀ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿ ಪ. ಪೂ.ಕಲ್ಲಯ್ಯಜ್ಜನವರು ವಹಿಸಿಕೊಳ್ಳಲಿದ್ದಾರೆ ಎಂದು ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ, ಖ್ಯಾತ ಕವಿಗಳು ಹಾಗೂ ನಾಟಕ ಬರಹಗಾರ ರಾಜಣ್ಣ ಜೇವರ್ಗಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಇಂದಿನ ದಿನಮಾನಗಳಲ್ಲಿ ರಂಗಭೂಮಿ ತೊಂದರೆ ಅನುಭವಿಸುತ್ತಿದೆ. ಟಿವಿ, ಮೊಬೈಲ್ ಹಾವಳಿಯಿಂದ ಬಹಳ ಹೊಡೆತ ಬಿದ್ದಿದೆ. ಆದರೂ, ನಾಟಕಗಳ ಪರಂಪರೆ 180 ವರ್ಷಗಳಿಂದ ಇದೆ. ಇಂತಹ ಕಷ್ಟದ ಪರಿಸ್ಥಿತಿಯಲ್ಲಿಯೂ ನಾಟಕಗಳು ನಡೆದುಕೊಂಡು ಹೋಗುತ್ತಿವೆ. ಕರ್ನಾಟಕದಲ್ಲಿ 24 ವೃತ್ತಿ ನಾಟಕ ಕಂಪನಿಗಳಿವೆ. ಅದರಲ್ಲಿ 8-10 ನಿ ರಂತರವಾಗಿ ಪ್ರದರ್ಶನಗೊಳ್ಳುತ್ತಿದ್ದು, ಇನ್ನುಳಿದ ಕಂಪನಿಗಳು ಅರೆಕಾಲಿಕವಾಗಿ ನಡೆಯುತ್ತಿವೆ ಎಂದರು.

ಸರ್ಕಾರ ನೀಡುವ ಅನುದಾನದಿಂದ ನಾಟಕ ಕಂಪನಿಗಳು ಇನ್ನೂ ಜೀವಂತವಾಗಿವೆ. ಅನುದಾನ ಇಲ್ಲದಿದ್ದರೆ ಕೇವಲ ಬೆರಳೆಣಿಕೆಯಷ್ಟು ನಾಟಕ ಕಂಪನಿಗಳು ಉಳಿಯುತ್ತಿದ್ದವು. ಯುವಕರು ಕಲೆಯ ಕಡೆ ಹೆಚ್ಚು ಗಮನ ಹರಿಸುತ್ತಿಲ್ಲ. ವೃತ್ತಿ ರಂಗಾಯಣವನ್ನು ನಾವು ಕೇಳುತ್ತಿದ್ದೇವೆ. ಮೈಸೂರಿನಲ್ಲಿ ರಂಗಾಯಾಣ ಇದೆ. ಇದರಿಂದ ಪ್ರತಿ ವರ್ಷ 20 ಕಲಾವಿದರು ಹೊರಬರುತ್ತಿದ್ದಾರೆ. ದಾವಣಗೆರೆಯಲ್ಲಿ ರಂಗಾಯಣ ಇದ್ದರೂ ಅದು ಸರಿಯಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಗದಗ ನಗರದಲ್ಲಿ ಮೊದಲು ಮೂರು ನಾಟಕ ಕಂಪನಿಗಳು ಏಕಕಾಲಕ್ಕೆ ನಡೆಯುತ್ತಿದ್ದವು. ಆದರೆ, ಈಗ ಆ ಪರಿಸ್ಥಿತಿ ಇಲ್ಲ. ಪುಟ್ಟರಾಜ ಕಲಾ ಪೋಷಕ ಸಂಘ ಕಲೆಯನ್ನು ಬೆಳೆಸಿ-ಉಳಿಸಲು ನಿರಂತರ ಪ್ರಯತ್ನ ಮಾಡುತ್ತಿದೆ. ನಗರಕ್ಕೆ ಯಾವುದೇ ನಾಟಕ ಕಂಪನಿ ಬಂದರೂ ಅವರಿಗೆ ತನು-ಮನ-ಧನದಿಂದ ಸಹಾಯ ಸಹಕಾರ ಮಾಡುತ್ತಾ ಬಂದಿದ್ದಾರೆ ಎಂದು ಸ್ಮರಿಸಿದರು. ಪುಟ್ಟರಾಜ ಕಲಾ ಪೋಷಕ ಸಂಘದ ಅಧ್ಯಕ್ಷ ಎಫ್.ವ್ಹಿ. ಮರಿಗೌಡ್ರ ಮಾತನಾಡಿ, ಜೇವರ್ಗಿ ಕುಟುಂಬದವರೆಲ್ಲರೂ ಕಲಾವಿದರಾಗಿದ್ದಾರೆ. ಇತ್ತೀಚಿನ ದಿನಗಳಲ್ಲಿ ನಾಟಕ ರಂಗ ನಶಿಸಿಹೋಗುತ್ತಿದೆ. ಮುಂಬುರುವ ದಿನಗಳಲ್ಲಿ ನಾಟಕ ಕಂಪನಿಗಳು ಉಳಿಯಬೇಕು ಎನ್ನುವುದು ನಮ್ಮ ಉದ್ದೇಶ. ಎಲ್ಲರೂ ನಾಟಕ ವೀಕ್ಷಿಸುವ ಮೂಲಕ ಕಲೆಯನ್ನು ಉಳಿಸಿ ಬೆಳೆಸಬೇಕಾದ ಅನಿವಾರ್ಯವಿದೆ ಎಂದ ಅವರು, ನಗರದ ಹೃದಯ ಭಾಗದಲ್ಲಿ ಕಲಾ ಮಂದಿರ ಸ್ಥಾಪನೆಗೆ ಸರಕಾರ ದಿಂದ ಸ್ಥಳ ನೀಡಬೇಕೆಂದು ಸರಕಾರವನ್ನು ಒತ್ತಾಯಿಸಿದರು. ಪತ್ರಿಕಾಗೋಷ್ಠಿಯಲ್ಲಿ ಸಂಗಮೇಶ್ ಬಿಳಗಿ, ಬಸವರಾಜ ಕರಮುಡಿ, ಪ್ರಭಯ್ಯ ಹಿರೇಮಠ, ಸಿದ್ದಣ್ಣ, ಅಂಬರೀಶ್ ನಾಗೂರ ಸೇರಿದಂತೆ ಇತರರು ಉಪಸ್ಥಿತರಿದ್ದರು. ಈ ನಾಟಕವು ಪ್ರತಿದಿನ 2 ಪ್ರದರ್ಶನ ನೀಡುತ್ತಿದ್ದು, ಮಧ್ಯಾಹ್ನ 3 ಗಂಟೆಗೆ ಮತ್ತು ಸಂಜೆ 6-15ಕ್ಕೆ ಪ್ರದರ್ಶನಗೊಳ್ಳಲಿದೆ. ನಗರದ ಭೂಮರಡ್ಡಿ ಆವರಣದ ಶ್ರೀ ತೋಂಟದಾರ್ಯ ಮಠದ ಜಾಗದಲ್ಲಿ ನಾಟಕ ನಡೆಯಲಿದೆ. ನಾಟಕ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಹೆಚ್.ಎಸ್. ಪಟ್ಟಣಶೆಟ್ಟರ, ಬಿ.ಬಿ. ಅಸೂಟಿ, ಶಾಂತಣ್ಣ ಮುಳವಾಡ, ನಜೀರ್ ಮಜ್ಜಿಗಿ, ಎಂ.ಎಂ. ಹಿರೇಮಠ, ಫೀರಸಾಬ್ ಕೌತಾಳ, ಡಾ. ಹನುಮಂತಗೌಡ್ರ ಕಲ್ಮನಿ, ಪ್ರಕಾಶ್ ಕರಿ, ವಿ.ಕೆ ಗುರುಮಠ, ಎಸ್.ವಿ ಅಕ್ಕಿ, ಆನಂದ ಬಿಂಗಿ, ರಾಮಕೃಷ್ಣ ಪಾಂಡ್ರೆ, ನಾಗರಾಜ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿರಲಿದ್ದಾರೆ ಎಂದು ಎಫ್.ವ್ಹಿ. ಮರಿಗೌಡ್ರ ಮಾಹಿತಿ ನೀಡಿದರು.

ಈ ನಾಟಕವು ಪ್ರತಿದಿನ 2 ಪ್ರದರ್ಶನ ನೀಡುತ್ತಿದ್ದು, ಮಧ್ಯಾಹ್ನ 3 ಗಂಟೆಗೆ ಮತ್ತು ಸಂಜೆ 6-15ಕ್ಕೆ ಪ್ರದರ್ಶನಗೊಳ್ಳಲಿದೆ. ನಗರದ ಭೂಮರಡ್ಡಿ ಆವರಣದ ಶ್ರೀ ತೋಂಟದಾರ್ಯ ಮಠದ ಜಾಗದಲ್ಲಿ ನಾಟಕ ನಡೆಯಲಿದೆ. ನಾಟಕ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಹೆಚ್.ಎಸ್. ಪಟ್ಟಣಶೆಟ್ಟರ, ಬಿ.ಬಿ. ಅಸೂಟಿ, ಶಾಂತಣ್ಣ ಮುಳವಾಡ, ನಜೀರ್ ಮಜ್ಜಿಗಿ, ಎಂ.ಎಂ. ಹಿರೇಮಠ, ಫೀರಸಾಬ್ ಕೌತಾಳ, ಡಾ. ಹನುಮಂತಗೌಡ್ರ ಕಲ್ಮನಿ, ಪ್ರಕಾಶ್ ಕರಿ, ವಿ.ಕೆ ಗುರುಮಠ, ಎಸ್.ವಿ ಅಕ್ಕಿ, ಆನಂದ ಬಿಂಗಿ, ರಾಮಕೃಷ್ಣ ಪಾಂಡ್ರೆ, ನಾಗರಾಜ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿರಲಿದ್ದಾರೆ ಎಂದು ಎಫ್.ವ್ಹಿ. ಮರಿಗೌಡ್ರ ಮಾಹಿತಿ ನೀಡಿದರು.

## ಡಾ. ಎಸ್.ಆರ್. ನಾಗನೂರರಿಂದ ಪ್ರೌಢಶಾಲೆಯ ಗಣಿತ ಪ್ರಯೋಗಾಲಯ ವೀಕ್ಷಣೆ

# ಗಣಿತ ಪ್ರಯೋಗಾಲಯ ವಿದ್ಯಾರ್ಥಿಗಳಿಗೆ ಸಹಕಾರಿ



■ವಿಜಯಸಾಕ್ಷಿ ಸುದ್ದಿ, ಗದಗ

ಅವ್ವ ಸೇವಾ ಟ್ರಸ್ಟ್‌ನ ನಿರ್ದೇಶಕರಾದ ಹೇಮಲತಾ ಬಸವರಾಜ ಹೊರಟ್ಟಿಯವರ ಸಹಕಾರದಿಂದ ನಿರ್ಮಾಣಗೊಂಡ ಗಣಿತ ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರ ಗಣಿತ ಕಲಿಕೆಗೆ ವಿದ್ಯಾರ್ಥಿಗಳಿಗೆ ಸಹಕಾರಿಯಾಗುತ್ತದೆ ಎಂದು ಚಿಂತಕ, ಖ್ಯಾತ ವೈದ್ಯ ಡಾ. ಎಸ್.ಆರ್. ನಾಗನೂರ ಅಭಿಪ್ರಾಯಪಟ್ಟರು.

ಅವರು ಸಭಾಪತಿ ಬಸವರಾಜ ಹೊರಟ್ಟಿ ದಂಪತಿಗಳಿಂದ ದತ್ತು ಪಡೆದ ಸಿದ್ಧಲಿಂಗ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ನಿರ್ಮಾಣಗೊಂಡ ಗಣಿತ ಪ್ರಯೋಗಾಲಯ ಹಾಗೂ ಸಂಶೋಧನಾ ಕೇಂದ್ರವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿ ಮಾತನಾಡಿದರು.

ಬಸವರಾಜ ಹೊರಟ್ಟಿ ದಂಪತಿಗಳು ದತ್ತು ಪಡೆದ ಮೇಲೆ ಈ ಶಾಲೆ ಖಾಸಗಿ ಶಾಲೆಗಳನ್ನು ಮೀರಿಸುವಂತೆ ಬೆಳೆದಿದೆ. ಇಲ್ಲಿನ ಪ್ರಯೋಗಾಲಯ, ಸ್ಮಾರ್ಟ್ ಕ್ಲಾಸ್, ಗಣಿತ ಪ್ರಯೋಗಾಲಯ ವಿದ್ಯಾರ್ಥಿಗಳ ಕಲಿಕೆಗೆ ಉಪಯುಕ್ತವಾಗುತ್ತವೆ. ಇಷ್ಟೊಂದು ಸೌಲಭ್ಯಗಳನ್ನು ಹೊಂದಿದ ಈ ಸರಕಾರಿ ಶಾಲೆ ರಾಜ್ಯಮಟ್ಟದಲ್ಲಿ ಮಾದರಿಯಾಗುವಂತೆ ಬೆಳೆಸುತ್ತಿರುವ ಸಭಾಪತಿ ಬಸವರಾಜ ಹೊರಟ್ಟಿಯವರ ಹಾಗೂ ಅವರ ಸ್ನೇಹಿತ ಡಾ.ಬಸವರಾಜ ಧಾರವಾಡ ಅವರ ಶ್ರಮ ಸಾರ್ಥಕವಾಗಿದೆ. ಇವರೊಂದಿಗೆ ಹೊರಟ್ಟಿಯವರ ಪತ್ನಿ ಹೇಮಲತಾ ಹೊರಟ್ಟಿಯವರು ಕೈ ಜೋಡಿಸಿದ್ದು ಶ್ಲಾಘನೀಯ ಎಂದರು.

ಡಾ.ಬಸವರಾಜ ಧಾರವಾಡ ಮಾತನಾಡಿ, ಬಸವರಾಜ ಹೊರಟ್ಟಿಯವರ ಸಹಕಾರದಿಂದ ಈ ಶಾಲೆಯನ್ನು ದತ್ತು ಪಡೆದು ರಾಜ್ಯದಲ್ಲಿಯೇ ಒಂದು ಮಾದರಿ ಶಾಲೆಯನ್ನಾಗಿ ಕಟ್ಟಬೇಕೆಂಬ ಸಂಕಲ್ಪ ನಮಗಿದೆ. ಅದಕ್ಕೆಲ್ಲ ಕೈಜೋಡಿಸಿ ಸಹಕರಿಸಿದ ಹೊರಟ್ಟಿಯವರ ಸಹಕಾರವನ್ನು ಗದುಗಿನ ಜನತೆ ಎಂದೂ ಮರೆಯಲಾರರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಭಾರಿ ಮುಖ್ಯೋಪಾಧ್ಯಾಯೆ ಜಯಲಕ್ಷ್ಮೀ ಬಸವರಾಜ ಅಣ್ಣಿಗೇರಿ, ಶಶಿಕಲಾ ಗುಳೆದವರ, ಸುಮಂಗಲಾ ಪತ್ತಾರ್, ಮಂಜುಳಾ ಸಾಂಬ್ರಾಣಿ, ಎಸ್.ಬಿ. ಗದ್ದನಗೇರಿ, ಜಿ.ಎನ್. ಅಳವಂಡಿ, ಶಂಕ್ರಮ್ಮ ಹನಮಗೌಡರ, ಶಾರದಾ ಬಾಣದ, ಶೋಭಾ ಗಾಳಿ, ಎಸ್.ಯು. ಕುಷ್ಟಗಿ, ವಿ.ಬಿ. ಶಿವನಗೌಡರ, ನಾಗಪ್ಪ ಶಿರೋಳ, ರಮೇಶ ಬಸರಿ, ಪದ್ಮಾವತಿ ದಾಸರ, ಎಲ್.ಬಿ. ಮಾಳೊತ್ತರ ಸೇರಿದಂತೆ ಶಾಲೆಯ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅಯ್ಯಾಚಾರ, ಲಿಂಗದೀಕ್ಷೆ ಕಾರ್ಯಕ್ರಮ




■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಮಾದಿಗ ಸಮುದಾಯವು ಅಭಿವೃದ್ಧಿ ಹೊಂದಬೇಕು ಎಂದು ಚಿತ್ರದುರ್ಗದ ಬಸವಮೂರ್ತಿ ಮಾದರ ಚನ್ನಯ್ಯ ಸ್ವಾಮೀಜಿ ಕರೆ ನೀಡಿದರು.

ಇಲ್ಲಿಯ ಅಂಬೇಡ್ಕರ ನಗರದ ಮರುಳ ಸಿದ್ದೇಶ್ವರ ಮಠದಲ್ಲಿ ಹಮ್ಮಿಕೊಂಡಿದ್ದ ಅಯ್ಯಾಚಾರ ಲಿಂಗದೀಕ್ಷೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಇಂದಿನ ಮುಂದುವರೆದ ಜಗತ್ತಿನಲ್ಲಿ ಮಾದಿಗ ಸಮುದಾಯವು ಮೌಢ್ಯತೆ, ಕಂದಾಚಾರ, ಮೂಡನಂಬಿಕೆಯಿಂದ ಹೊರ ಬಂದು ಶಿಕ್ಷಣಕ್ಕೆ ಕ್ಷೇತ್ರದಲ್ಲಿ ಸಾಧನೆ ಮಾಡಬೇಕು. ತಮ್ಮ ಮಕ್ಕಳಿಗೆ ಹೆಚ್ಚೆಚ್ಚು ಶಿಕ್ಷಣವನ್ನು ಕೊಡಿಸಬೇಕು. ಧಾರ್ಮಿಕ ಕಾರ್ಯಗಳೊಂದಿಗೆ ಶರಣರ ತತ್ವಗಳನ್ನು ಅಳವಡಿಸಿಕೊಂಡು ಸಂಸ್ಕಾರವಂತರಾಗಬೇಕು. ಸರಕಾರ ಸಮುದಾಯಕ್ಕೆ ಹೆಚ್ಚು ಅನುಕೂಲ ಕಲ್ಪಿಸಿದ್ದು, ಅವುಗಳನ್ನು ಸದುಪಯೋಗಪಡಿಸಿಕೊಂಡು ಉದ್ಯೋಗದಾತರಬೇಕು. ಅಂದಾಗ ಮಾತ್ರ ಡಾ. ಬಿ.ಆರ್. ಅಂಬೇಡ್ಕರ ಅವರ ಕನಸು ನನಸಾಗಿಸಲು ಸಾಧ್ಯವಾಗುತ್ತದೆ. ಸಮುದಾಯದ ರಾಜಕೀಯ ಗಣ್ಯರು ಶೈಕ್ಷಣಿಕವಾಗಿ ಹಿಂದುಳಿದವರನ್ನು ಮುಂದೆ ತರಲು ಪ್ರಯತ್ನಿಸಬೇಕು ಎಂದರು.

ಇಟಗಿಯ ಗದಿಗೆಪ್ಪಜ್ಜನವರ ಮಾತನಾಡಿ, ಪದೆ ಪದೇ ಇಂತಹ ಸಂಘಟಾನಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದರ ಮೂಲಕ ಸಮುದಾಯದ ಯುವಕರು ಆರೋಗ್ಯವಂತ ಸಮಾಜವನ್ನು ನಿರ್ಮಿಸಲು ಮುಂದಾಗಬೇಕಿದೆ ಎಂದರು.

ಗ್ರಾಮದ ಹುಚ್ಚಯ್ಯಸ್ವಾಮಿಗಳ ಪುತ್ರರಾದ ಶಿವರಾಜ ಹಾಗೂ ಸಿದ್ಧಾರ್ಥ ಇವರಿಗೆ ಲಿಂಗದೀಕ್ಷೆಯೊಂದಿಗೆ ಅಯ್ಯಾಚಾರ ಕಾರ್ಯಕ್ರಮವು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ನೆರವೇರಿತು. ಬೆಳಿಗ್ಗೆ ಮರುಳಸಿದ್ದೇಶ್ವರ ಸ್ವಾಮಿಗೆ ಬಿಲ್ವಾರ್ಚನೆ, ಅಭಿಷೇಕ ಕಾರ್ಯಕ್ರಮಗಳು ನೆರವೇರಿದವು.

ಸವಡಿ ಮರುಳಸಿದ್ದೇಶ್ವರ ಶ್ರೀಗಳು, ಬಿಸರಳ್ಳಿಯ ಶಿವಯ್ಯ ಸ್ವಾಮಿಗಳು, ಹುಚ್ಚಯ್ಯಸ್ವಾಮಿಗಳು, ಶಿವಮುನಿ ಸ್ವಾಮೀಜಿ, ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ, ಗದಗ ಜಿಲ್ಲಾ ಎಸ್.ಸಿ.-ಎಸ್.ಟಿ ಸಮಿತಿಯ ಸದಸ್ಯ ಬಸವರಾಜ ಡಿ.ಮುಳ್ಳಾಳ, ಯಲ್ಲಪ್ಪ ಮುಳ್ಳಾಳ, ಸಿದ್ದಪ್ಪ ಸೋಮನಕಟ್ಟಿ ವೇದಿಕೆಯಲ್ಲಿದ್ದರು. ಪ್ರಕಾಶ ಮುಳ್ಳಾಳ ಸ್ವಾಗತಿಸಿದರು. ಬಿ.ಆಯ್. ಮುಳ್ಳಾಳ ನಿರೂಪಿಸಿ ವಂದಿಸಿದರು.

# ಶುಲ್ಕ ಸಂಗ್ರಹಣೆ ನಿಲ್ಲಿಸಲು ಮನವಿ



■ವಿಜಯಸಾಕ್ಷಿ ಸುದ್ದಿ, ಗದಗ

ಬೀದಿ ಬದಿ ವ್ಯಾಪಾರಿಗಳ ಹಿತಾಸಕ್ತಿ ಕಾಪಾಡುವ ಮತ್ತು ನಿಯಮಗಳನ್ನು ರೂಪಿಸುವ ಉದ್ದೇಶದಿಂದ ಬೀದಿ ಬದಿ ವ್ಯಾಪಾರಿಗಳ (ಜೀವನೋಪಾಯ ರಕ್ಷಣೆ ಮತ್ತು ವ್ಯಾಪಾರ ನಿಬಂಧನೆ) ಅಧಿನಿಂಯಮ-2014ನ್ನು ಅನುಷ್ಠಾನಗೊಳಿಸುವಂತೆ ಗದಗ-ಬೆಟಗೇರಿ ಪಟ್ಟಣ ವ್ಯಾಪಾರ ಸಮಿತಿಯ ಸದಸ್ಯರಾದ ಅನ್ವರ ಶಿರಹಟ್ಟಿಯವರು ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷರಿಗೆ ಮತ್ತು ಪೌರಾಯುಕ್ತರಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಯಾವುದೇ ನಿರ್ಧಾರಗಳು ಬೀದಿ ಬದಿ ವ್ಯಾಪಾರಕ್ಕೆ ಸಂಭಂದಪಟ್ಟಿರುವಾಗ ಆಯಾ ಸ್ಥಳೀಯ ಸಂಸ್ಥೆಗಳಲ್ಲಿ ರಚನೆಗೊಂಡ ಪಟ್ಟಣ ವ್ಯಾಪಾರ ಸಮಿತಿಯು ಜವಾಬ್ದಾರಿಯನ್ನು ಹೊಂದಿರುತ್ತದೆ. ಆದರೆ ನಿರ್ಣಯಗಳು ಪಟ್ಟಣ ವ್ಯಾಪಾರ ಸಮಿತಿ ಸದಸ್ಯರ ಗಮನಕ್ಕೆ ಬಾರದೆ ಜಾರಿಗೆ ಬರುತ್ತಿರುವುದು ಕಾನೂನು ಉಲ್ಲಂಘನೆ ಮತ್ತು ಪ್ರಜಾಪ್ರಭುತ್ವ ವಿರೋಧಿ, ಏಕಪಕ್ಷೀಯ ಮತ್ತು ಸರ್ವಾಧಿಕಾರಿ ಧೋರಣೆ-ಯಾಗಿದೆ ಎಂದರು.

ನಗರಸಭೆ ಪೌರಾಯುಕ್ತರಿಗೆ ಹಾಗೂ ಸಮುದಾಯ ಸಂಘಟನೆ ಅಧಿಕಾರಿಗಳಿಗೆ ವಿನಂತಿ ಮಾಡಿಕೊಂಡರೂ ಸ್ಪಂದನೆ ದೊರೆತಿಲ್ಲ. ಆದ್ದರಿಂದ ಗದಗ-ಬೆಟಗೇರಿ ನಗರಸಭೆ ವತಿಯಿಂದ 10 ರೂ.ಗಳ ಸಂಗ್ರಹಣೆ ಮಾಡುವುದನ್ನು ನಿಲ್ಲಿಸಬೇಕು. ಕಾನೂನು ಪ್ರಕಾರ ಪಟ್ಟಣ ವ್ಯಾಪಾರ ಸಮಿತಿ ನಿರ್ಧಾರಗೊಳ್ಳುವವರೆಗೆ ಬೀದಿ ಬದಿ ವ್ಯಾಪಾರಿಗಳಿಂದ ಶುಲ್ಕ ಸಂಗ್ರಹಣೆ ನಿಲ್ಲಿಸಬೇಕೆಂದು ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ನಗರಸಭೆ ಅಧ್ಯಕ್ಷೆ ಉಷಾ ದಾಸರ, ಇದಕ್ಕೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಪಟ್ಟಣ ಮಾರಾಟ ಸಮಿತಿಯ ಸದಸ್ಯರಾದ ರಾಜೇಖಾನ ಗುಲಾಬಖಾನ ಪಠಾಣ, ಜಾಫರ ಢಾಲಾಯತ, ಹಜಮತ ಆಲದಕಟ್ಟಿ ಉಪಸ್ಥಿತರಿದ್ದರು.

## ಯಡಿಯೂರು ಕ್ಷೇತ್ರಕ್ಕೆ ದಾನವಾಗಿ ನೀಡಿದ ಆನೆಯನ್ನು ರಕ್ಷಿಸಲು ಭಕ್ತರ ಆಗ್ರಹ

# 'ಗಂಗಾ'ಳನ್ನು ಕಾಡಿಗೆ ಬಿಟ್ಟಿದ್ದೇಕೆ?



■ವಿಜಯಸಾಕ್ಷಿ ಸುದ್ದಿ, ಗದಗ

ತುಮಕೂರು ಜಿಲ್ಲೆಯ ಕುಣಿಗಲ್ ತಾಲೂಕಿನ ಯಡಿಯೂರು ಗ್ರಾಮದಲ್ಲಿ ದ್ವಿತೀಯ ಬಸವೇಶ್ವರರೆನಿಸಿದ ಶ್ರೀ ತೋಂಟದ ಸಿದ್ಧಲಿಂಗ ಶಿವಯೋಗಿಗಳ ಜೀವಂತ ಸಮಾಧಿಯಿದ್ದು, ದೊಡ್ಡ ದೊಡ್ಡ ಕ್ಷೇತ್ರಗಳಲ್ಲಿ ಆನೆ ಇರುವಂತೆ ಯಡಿಯೂರಿನಲ್ಲಿಯೂ ಇರಲಿ ಎಂಬ ಸದಾಶಯದಿಂದ ಕನ್ನಡದ ಕುಲಗುರುಗಳಾಗಿದ್ದ ಡಂಬಳ-ಗದುಗಿನ ಪೂಜ್ಯ ಲಿಂಗೈಕ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ತಮ್ಮ ಮಠದ ಗಂಗಾ ಎಂಬ ಆನೆಯನ್ನು ಮುಜರಾಯಿ ಇಲಾಖೆಗೆ ಸೇರಿದ ಯಡಿಯೂರು ಶ್ರೀ ತೋಂಟದ ಸಿದ್ಧಲಿಂಗ ಶಿವಯೋಗಿಗಳ ಮಠಕ್ಕೆ ದಾನವಾಗಿ ಕೊಟ್ಟರು.

1996ರಲ್ಲಿ ಕರ್ನಾಟಕದ ಮುಖ್ಯಮಂತ್ರಿಗಳಾಗಿ ಪ್ರಮಾಣವಚನ ಸ್ವೀಕರಿಸಿದ ಜೆ.ಎಚ್. ಪಟೇಲರು ಅದೇ ದಿನ ಯಡಿಯೂರಿಗೆ ಅಂದಿನ ಸಚಿವರಾಗಿದ್ದ ಎಂ.ಪಿ. ಪ್ರಕಾಶ್ ಅವರೊಂದಿಗೆ ಬಂದು ಈ ಆನೆಯನ್ನು ದಾನಿಗಳಾದ ಪೂಜ್ಯ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರಿಂದ ಯಡಿಯೂರು ಕ್ಷೇತ್ರದಲ್ಲಿ ಮುಜರಾಯಿ ಇಲಾಖೆಯ ಪರವಾಗಿ ದಾನವಾಗಿ ಸ್ವೀಕರಿಸಿದ್ದು ಇತಿಹಾಸ.

ಆದರೆ ಇತ್ತೀಚೆಗೆ 2-3 ತಿಂಗಳ ಹಿಂದೆ ಆರೋಗ್ಯಕರವಾಗಿದ್ದ ಈ ಆನೆಯನ್ನು ಕಾಡಿಗೆ ಒಯ್ಯಬಾರದು, ರಕ್ಷಿಸಲು ದಾನಿಗಳಿಗೆ ಆನೆಯನ್ನು ಮರಳಿ ಕೊಡಬೇಕು ಎಂದು ಸೂಚನೆ ನೀಡಿದರೂ ಸಹ ದಾನಿಗಳ ಮತ್ತು ಭಕ್ತರ ಮಾತನ್ನು ಕೇಳದೆ ಕೋಲಾರದ ಹತ್ತಿರ ಕಾಡಿಗೆ ಬಿಟ್ಟು ಬರಲಾಗಿದೆ.

ಎಡೆಯೂರು ದೇವಸ್ಥಾನಕ್ಕೆ ಪ್ರತಿ ವರ್ಷ ಅಂದಾಜು 30 ಕೋಟಿ ರೂಪಾಯಿಗಿಂತ ಅಧಿಕ ಆದಾಯವಿದ್ದರೂ ದಾನವಾಗಿ ನೀಡಿದ ಈ ಆನೆಯನ್ನು ಸಾಕಲು ಸಾಧ್ಯವಾಗದೇ ಕಾಡಿಗೆ ಬಿಟ್ಟು ಬಂದಿರುವುದಕ್ಕೆ ಶ್ರೀ ಸ್ವಾಮಿಯ ಭಕ್ತರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈಗ ಈ ಆನೆ ದುರಾದೃಷ್ಟವಶಾತ್ ಸಾಯುವ ಹಂತಕ್ಕೆ ಬಂದಿದೆ. ಕೆಲ ಪಟ್ಟಭದ್ರ ಶಕ್ತಿಗಳ ಕುತಂತ್ರಕ್ಕೆ ಈ ಆನೆಯನ್ನು ಬಲಿ ನೀಡಲಾಗುತ್ತಿದೆ. ಇದಕ್ಕೆ ಕಾರಣರಾದವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಶ್ರೀ ಎಡೆಯೂರು ಸಿದ್ಧಲಿಂಗೇಶ್ವರ ಸ್ವಾಮಿಯ ಭಕ್ತರು ಪತ್ರಿಕಾ ಪ್ರಕಟಣೆಯ ಮೂಲಕ ಒತ್ತಾಯಿಸಿದ್ದಾರೆ.

# ಜನಸ್ಪಂದನ ಸಭೆ ಜೂನ್ 21ಕ್ಕೆ

■ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಾ ಮಟ್ಟದ ಜನಸ್ಪಂದನ ಸಭೆಯನ್ನು ಜೂನ್ 21ರಂದು ಬೆಳಿಗ್ಗೆ 10.30ಕ್ಕೆ ಪಟ್ಟಣದ ಗುರುಭವನದಲ್ಲಿ ಆಯೋಜಿಸಲಾಗಿದೆ. ತಾಲೂಕಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಹಾಜರಿರುವ ಮೂಲಕ ಸಾರ್ವಜನಿಕರ ಕುಂದು-ಕೊರತೆಗಳನ್ನು ಆಲಿಸಬೇಕು ಹಾಗೂ ಸಮಸ್ಯೆಗಳನ್ನು ಇತ್ಯರ್ಥ ಪಡಿಸಬೇಕು ಎಂದು ತಹಸೀಲ್ದಾರ್ ನಾಗರಾಜ ಕೆ. ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಪ್ರವೇಶದ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪಾಲಿಟೆಕ್ನಿಕ್, ನರಸಾಪೂರ, ಬೆಟಗೇರಿ, ಗದಗ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಇರುವ ಡಿಪ್ಲೋಮಾ ಕೋರ್ಸ್ ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ "ಆಫ್-ಲೈನ್" ಮೂಲಕ ಮೆರಿಟ್ ಹಾಗೂ ರೋಷ್ಟರ್ ಆಧಾರದ ಮೇರೆಗೆ ಡಿಪ್ಲೋಮಾ ಪ್ರವೇಶ ಪಡೆಯುವ ದಿನಾಂಕವನ್ನು ಜೂನ್ 29 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಯನ್ನು ಕಾಲೇಜಿನ ಕಚೇರಿ ಅವಧಿಯಲ್ಲಿ ಪಡೆಯಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka